# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 179 ಶೀರ್ಷಿಕೆ ಕೋಡ್: ಕೆಏಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ: 29–01–2024 ಸೋಮವಾರ ಪುಟ: 4 ಬೆಲೆ : ರೂ.2–00
Volume - 01 Issue - 179 Title- Code: KARKAN 28269 Chitradurga Date: 29-01-2024 Monday Page: 4 Price: Rs. 2-00



ಒಳಪುಟದ ಸುದ್ದಿಗಳು

ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ ವಜಾ ಮಾಡಿ: ಹೆಬ್ಬಿಕೆ 2

ದೇಶದ ಧ್ವಜ ಬಿಟ್ಟು ಭಾಗವಧ್ವಜ ಹಾರಿಸಿದ್ದು ಸರಿಯಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ 3

ಕನ್ನಡದ ಬಿಗ್ ಬಾಸ್ ಸೀಸನ್ 10ರ ವಿನ್ನರ್ ಕಾರ್ತಿಕ್ ಮಹೇಶ್ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### 11 ಗಂಟೆಗೆ ಬರಬೇಕಿದ್ದ ಸಿಎಂ 45 ನಿಮಿಷ ತಡವಾಗಿ ಬಂದರು

» ಚಿತ್ರದುರ್ಗ

ಕೋಟೆನಾಡು ಚಿತ್ರದುರ್ಗದಲ್ಲಿ ಶೋಷಿತರ ಜಾಗೃತಿ ಸಮಾವೇಶವನ್ನು ಬೆಳಗ್ಗೆ 11ಗಂಟೆಗೆ ಸಮಾವೇಶಕ್ಕೆ ಚಾಲನೆ ನೀಡಬೇಕಿದ್ದ ಸಿಎಂ ಸಿದ್ದರಾಮಯ್ಯ ಸಮಾವೇಶ ವೇದಿಕೆಯಲ್ಲಿ ಬಹುತೇಕ ಆಸನಗಳು ಖಾಲಿ ಇದ್ದ ಕಾರಣ ಮತ್ತು ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬಹುದು ಎಂಬ ಕಾರಣದಿಂದ ಕಾರ್ಯಕ್ರಮಕ್ಕೆ 12–45 ಕ್ಕೆಆಗಮಿಸಿದರು.ಇತರೆ ಕಾರ್ಯಕ್ರಮ ವೇಳಾಪಟ್ಟಿ ಕಾರಣದಿಂದ ಡಿಸಿಎಂ ಡಿಕೆಶಿ ಮಾತನಾಡುತ್ತಿದ್ದರು ಈ ಸಂದರ್ಭದಲ್ಲಿ ಸಿಎಂ ಆಗಮಿಸಿದರು.

### ವೆಜ್ ಅಂಡ್ ನಾನ್ ವೆಜ್ ಊಟದ ವ್ಯವಸ್ಥೆ

ನಗರದ ಹೊರವಲಯದ ಶ್ರೀ ಮಾದರ ಚೆನ್ನಯ್ಯ ಗುರು ಪೀಠದ ಹಿಂಭಾಗದಲ್ಲಿ 150 ಹೆಕ್ಟೇರ್ ವಿಸ್ತೀರ್ಣ ಪ್ರದೇಶದಲ್ಲಿ ಹಮ್ಮಿಕೊಂಡಿದ್ದ ಶೋಷಿತ ಸಮುದಾಯಗಳ ಬೃಹತ್ ಸಮಾವೇಶದಲ್ಲಿ ಭಾಗವಹಿಸಿದ್ದ ಜನರಿಗೆ ಊಟಕ್ಕಾಗಿ 33 ಸಾವಿರ ಕೆಜಿ ಚಿಕನ್ ಬಿರಿಯಾನಿ ವ್ಯವಸ್ಥೆಯನ್ನು ಕಲ್ಪಿಸಿದ್ದರು . ಉಳಿದಂತೆ ಸಸ್ಯಹಾರಿಗಳಿಗೆ ಮೊಸರನ್ನ, ಟೊಮೊಟೊ ಬಾತ್ ವ್ಯವಸ್ಥೆಯನ್ನು ಕಲ್ಪಿಸಿದರು. ಊಟಕ್ಕಾಗಿ ನೂಕುನುಗ್ಗಲು ಉಂಟಾಗದಂತೆ 1,000 ಕೌಂಟರ್‌ಗಳನ್ನು ವ್ಯವಸ್ಥೆ ಮಾಡಲಾಗಿತ್ತು. ಬೃಹತ್ ಆಕಾರದ ಪೆಂಡಲ್ ನಿರ್ಮಾಣ ಮಾಡಿ ಲಕ್ಷಾಂತರ ಕುರ್ಚಿಗಳನ್ನು ಅಳವಡಿಸಲಾಗಿತ್ತು. ಕಾರ್ಯಕ್ರಮ ವೀಕ್ಷಣೆಗೆ 23 ಎಲ್‌ಇಡಿ ಪರದೆಗಳನ್ನು ವ್ಯವಸ್ಥೆ ಮಾಡಿದ್ದರು.

### ಆಸನಗಳಿಗೆ ಪರದಾಡಿದ ಸಚಿವರು, ಶಾಸಕರು ಗೊಂದಲ ಗೂಡಾದ ಕಾರ್ಯಕ್ರಮದ ವೇದಿಕೆ

ಶೋಷಿತ ಸಮುದಾಯಗಳ ಸಮಾವೇಶದಲ್ಲಿ ಮೂರು ವೇದಿಕೆಗಳು ನಿರ್ಮಿಸಲಾಗಿತ್ತು. ಆದರೆ ಎಡ ಬಲ ಭಾಗದಲ್ಲಿ ನಿರ್ಮಿಸಲಾಗಿದ್ದ ವೇದಿಕೆಗಳಲ್ಲಿ ಖಾಲಿಯಾಗಿದ್ದವು. ಆದರೆ ಸಿಎಂ ಮತ್ತು ಸಚಿವರು ,ಶಾಸಕರು ಮಾಜಿ ಶಾಸಕರು, ಸಚಿವರಿಗೆ ನಿರ್ಮಾಣ ಮಾಡಿದ್ದ ಮುಖ್ಯ ವೇದಿಕೆ ಗೊಂದಲದ ಗೂಡಾಗಿತ್ತು. ಅಶಿಸ್ತು ಪ್ರದರ್ಶನವಾಯಿತು.ಪೋಲಿಸರಿಗೆ ಯಾರು ವಿವಿಐಪಿ, ವಿಐಪಿ ಯಾವ ಪ್ರೋಟ್ ಕಾಲ್ ಇಲ್ಲದೇ ಶಾಸಕರು ಸಚಿವರು ಸಹ ಆಸನಕ್ಕಾಗಿ ಪರದಾಡಿದರು.

ಸಂವಿಧಾನವನ್ನು ನಾವು ರಕ್ಷಿಸಿದರೆ ಸಂವಿಧಾನ ನಮ್ಮನ್ನು ರಕ್ಷಿಸುತ್ತದೆ

# ಸಂವಿಧಾನ ಬದಲಾಯಿಸುತ್ತೇವೆ ಎನ್ನುವವರಿಗೆ ತಕ್ಕ ಪಾಠ ಕಲಿಸಿ: ಸಿ.ಎಂ ಸಿದ್ದರಾಮಯ್ಯ ಕರೆ

## ಜಾತಿ ಹೆಸರಲ್ಲಿ ಸಮಾಜವನ್ನು ಛಿದ್ರಗೊಳಿಸಿ ಸಂವಿಧಾನ ವಿರೋಧಿಸುವ ಬಿಜೆಪಿ, ಆರ್‌ಎಸ್‌ಎಸ್ ಅನ್ನು ತಿರಸ್ಕರಿಸಿ



» ಚಿತ್ರದುರ್ಗ

ಜಾತಿ ಹೆಸರಲ್ಲಿ ಸಮಾಜವನ್ನು ಛಿದ್ರಗೊಳಿಸುವ ಸಂವಿಧಾನ ವಿರೋಧಿ ಃಎಕ–ಖಖಖ ಅನ್ನು ತಿರಸ್ಕರಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಕರ್ನಾಟಕ ಶೋಷಿತ ಜಾತಿ–ಸಮುದಾಯಗಳ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ ಚಿತ್ರದುರ್ಗದಲ್ಲಿ ಆಯೋಜಿಸಿದ್ದ "ಶೋಷಿತರ ಜಾಗೃತಿ ಸಮಾವೇಶವನ್ನು" ಉದ್ಘಾಟಿಸಿ ಮಾತನಾಡಿದರು.

ಹಿಂದುಳಿದ, ದಲಿತ ಮತ್ತು ಶೋಷಿತ ಜಾತಿ ಸಮುದಾಯಗಳ ಜನ ತಮ್ಮ ಶತ್ರು ಯಾರು ಎನ್ನುವುದನ್ನು ಸ್ಪಷ್ಟವಾಗಿ ಅರ್ಥ ಮಾಡಿಕೊಳ್ಳಬೇಕು. ಶತ್ರುಗಳನ್ನು ಸ್ಪಷ್ಟವಾಗಿ ಗುರುತಿಸಬೇಕು.ಅವರನ್ನುಸಂಪೂರ್ಣವಾಗಿ ತಿರಸ್ಕರಿಸಿ ನಿಮ್ಮ ಸ್ವಾಭಿಮಾನ ಬೆಳೆಸಿಕೊಳ್ಳಿ ಎಂದು ಸೂಚಿಸಿದರು.

ಮಂಡಲ್ ವರದಿಯನ್ನು ಬಿಜೆಪಿ ಮತ್ತು ಖಖಖ ವಿರೋಧಿಸುತ್ತಲೇ ಬಂದಿದೆ. ಸಾಮಾಜಿಕ ನ್ಯಾಯ ಮತ್ತು ಸಮಾನ ಅವಕಾಶಗಳನ್ನು ಃಎಕ–ಖಖಖ ನಿರಂತರವಾಗಿ ವಿರೋಧಿಸುತ್ತಲೇ ಇದೆ. ಆದ್ದರಿಂದ ಸಂವಿಧಾನ ಮತ್ತು ಮೀಸಲಾತಿ ಹಾಗೂ ಸಾಮಾಜಿಕ ನ್ಯಾಯದ ವಿರೋಧಿಗಳ ಕೈಗೆ ಅಧಿಕಾರ ಹೋಗಬಾರದು ಎಂದು ಅಂಬೇಡ್ಕರ್ ಎಚ್ಚರಿಸಿದ್ದರು. ಈ ಎಚ್ಚರಿಕೆಯನ್ನು ನಾವು ಮರೆಯಬಾರದು ಎಂದರು.

ಬಾಬಾ ಸಾಹೇಬ್ ಅವರ ಸಂವಿಧಾನ ಇಲ್ಲದೇ ಹೋಗಿದ್ದರೆ ಕೆ.ಎಸ್.ಈಶ್ವರಪ್ಪ ಸಿ.ಟಿ.ರವಿಮತ್ತುಆರ್.ಅಶೋಕ್‌ಶಾಸಕರಾಗಿ ವಿಧಾನಸಭೆ ಪ್ರವೇಶಿಸಲು ಸಾಧ್ಯವೇ ಇರಲಿಲ್ಲ. ಯಾರದ್ದೋ ಹೊಲ ಗದ್ದೆಗಳಲ್ಲಿ ಕೂಲಿ ಮಾಡುತ್ತಾ ಕೂರಬೇಕಾಗಿತ್ತು ಎಂದು ಮುಖ್ಯಮಂತ್ರಿಗಳು ಟೀಕಿಸಿದರು.

ಕುರಿ ಕಾಯುವವನ ಮಗ ಮುಖ್ಯಮಂತ್ರಿ ಆಗಿಬಿಟ್ಟೆ ಎನ್ನುವ ಕಾರಣಕ್ಕೆ ಪಟ್ಟ ಭದ್ರರು ನನ್ನನ್ನು ವಿರೋಧಿಸುತ್ತಾರೆ. ಎಲ್ಲಾ ಜಾತಿ, ಎಲ್ಲಾ ಧರ್ಮದ ಮಧ್ಯಮ ವರ್ಗ ಮತ್ತು ಬಡವರಿಗೆ ಅನುಕೂಲ ಆಗುವ ಯೋಜನೆಗಳನ್ನು ಜಾರಿಗೆ ತಂದಿದ್ದಕ್ಕೆ ನನ್ನನ್ನು ವಿರೋಧಿಸುತ್ತಿದ್ದಾರೆ.

ಅನ್ನ ಭಾಗ್ಯ, ಶೂ ಭಾಗ್ಯ, ಸಮವಸ್ತ್ರ ಭಾಗ್ಯ ಸೇರಿ ಸಾಲು ಸಾಲು ಅನುಕೂಲಗಳನ್ನು ಎಲ್ಲಾ ಜಾತಿ, ಎಲ್ಲಾ ಧರ್ಮದ ಬಡವರಿಗೆ ಕಲ್ಪಿಸಿದೆ.ಇದಕ್ಕೇ ನನ್ನನ್ನುವಿರೋಧಿಸುತ್ತಾರೆ. ಆದರೆ ನಾನು ಎದೆ ಗುಂದದೆ ನಿಮ್ಮ ಪರವಾಗಿ ಇರುತ್ತೇನೆ ಎಂದರು.

ಜಾತಿ ತಾರತಮ್ಯ, ಜಾತಿ ಶೋಷಣೆ, ಜಾತಿ ಆಧಾರಿತ ಅಸಮಾನತೆ ಜಾರಿಯಲ್ಲಿ ಇರುವವರೆಗೆ ಇಂಥಾ ಸಮಾವೇಶಗಳು ಅಗತ್ಯ ಮತ್ತು ಅನಿವಾರ್ಯ ಎಂದು ವಿವರಿಸಿದರು.

ಸಂಘಟನೆಗಳ ಮೂಲಕ ಜಗೃತಿ ಪಡೆದುಕೊಂಡರೆ ಮಾತ್ರ ಜಾತಿ ವ್ಯವಸ್ಥೆ ನಾಶವಾಗುತ್ತದೆ ಎನ್ನುವ ಎಚ್ಚರವನ್ನು ಅಂಬೇಡ್ಕರ್ ಮುಂತಾದ ಮಹನೀಯರು ನೀಡಿದ್ದಾರೆ. ಕುಲ ಕುಲ ಎಂದು ಬಡಿದಾಡದಿರಿ ಎಂದು ಕರೆ ನೀಡಿದ ಕನಕದಾಸರನ್ನು ಒಂದು ಜಾತಿಗೆ ಸೀಮಿತಗೊಳಿಸಿ ಅವಮಾನಿಸಬೇಡಿ ಎಂದರು. ಜಾತಿ ವ್ಯವಸ್ಥೆ ಕಾರಣಕ್ಕೆ ಶತ ಶತಮಾನಗಳಿಂದ ತಳ ಸಮುದಾಯಗಳ ಜನ ಶೋಷಣೆಗೆ ಒಳಗಾಗುತ್ತಲೇ ಇದ್ದಾರೆ. ಅಕ್ಷರ ಸಂಸ್ಕೃತಿಯಿಂದ ವಂಚಿತರಾದ ಪರಿಣಾಮ ಸಮಾಜದಲ್ಲಿ ಅಸಮಾನತೆ ಸೃಷ್ಟಿ ಆಯಿತು. ಸಾಮಾಜಿಕ, ಆರ್ಥಿಕ ಅಸಮಾನತೆಗೆ ಜಾತಿ ವ್ಯವಸ್ಥೆಯೇ ಕಾರಣ.

- **ಕಾಂತರಾಜ್ ಅವರ ವರದಿಯನ್ನು ಕೆಲವರು ಓದದೆ, ತಿಳಿಯದೆ ವಿರೋಧಿಸುತ್ತಿದ್ದಾರೆ. ನಾವು ಕಾಂತರಾಜ ವರದಿಯನ್ನು ಖಂಡಿತಾ ಸ್ವೀಕರಿಸುತ್ತೇವೆ**
- **ಕೇಂದ್ರದಲ್ಲಿ ನಮ್ಮ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಇಡಿ ದೇಶದಲ್ಲಿ ಜಾತಿ ಗಣತಿ ಮಾಡಿಸುತ್ತೇವೆ ಎಂದು ರಾಹುಲ್ ಗಾಂಧಿ ಘೋಷಿಸಿದ್ದಾರೆ**

# ಜಾತಿಗಣತಿ ನಡೆಸಲು ನಾವು ಬದ್ಧ: ಡಿಸಿಎಂ ಡಿ.ಕೆ.ಶಿವುಕುಮಾರ್



» ಚಿತ್ರದುರ್ಗ

ಕಾಂಗ್ರೆಸ್ ಎಲ್ಲರನ್ನೂ ಒಟ್ಟಾಗಿ ತೆಗೆದುಕೊಂಡು ದೇಶಾದ್ಯಂತ ಜಾತಿ ಜನಗಣತಿ ನಡೆಸಲು ಬದ್ಧವಾಗಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ.

ಚಿತ್ರಗ್ಗದಲ್ಲಿ ನಡೆದ ಶೋಷಿತರ ಜಾಗೃತಿ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿ ದೇಶಾದ್ಯಂತ ಎಲ್ಲಾ ಸಮುದಾಯಗಳ ಶಕ್ತಿಯನ್ನು ಒಟ್ಟುಗೂಡಿಸಬೇಕು ಎಂಬ ಸಂಕಲ್ಪದೊಂದಿಗೆ ಜಾತಿ ಜನಗಣತಿ ನಡೆಸಬೇಕು ಎಂಬ ನಿಲುವನ್ನು ಕಾಂಗ್ರೆಸ್ ಹೊಂದಿದೆ. ಇದಕ್ಕೆ ನಾವು ಬದ್ಧರಾಗಿದ್ದೇವೆ. ಯಾರಿಗೂ ಆತಂಕ ಬೇಡ. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡುತ್ತೇವೆ ಎಂದು ಹೇಳಿದರು.

ಯಶಸ್ಸು ಯಾರ ಆಸ್ತಿಯೂ ಅಲ್ಲ. ರಾಜ ರಾಜನಾಗಿ, ಶ್ರೀಮಂತ ಶ್ರೀಮಂತನಾಗಿಯೇ ಇರುವುದಿಲ್ಲ, ಪ್ರಜಾಪ್ರಭುತ್ವದಲ್ಲಿ ಬಡವನು ರಾಜನಾಗಬಹುದು, ಶ್ರೀಮಂತನಾಗಬಹುದು. ಆದರೆ ಅದಕ್ಕೆ ಕಠಿಣ ಪರಿಶ್ರಮ ಮತ್ತು ಹೋರಟ ಅಗತ್ಯವಿದೆ ಎಂದು ಹೇಳಿದರು.

ಮನೆಯಿಂದ ಮೇಲೆ ಕಷ್ಟ, ಕಸ ಎರಡೂ ಇರುತ್ತದೆ. ಕಷ್ಟ ಬಂದಾಗ ಜಗ್ಗಬಾರದು ಹೋರಾಟ ನಡೆಸಬೇಕು. ಭಗವದ್ಗೀತೆ, ರಾಮಾಯಣ,ಕುರಾ□□ಗಳುಗ್ರಂಥಗಳನ್ನು ಬಿಟ್ಟರೆ ಅಂಬೇಡ್ಕರ್ ಸಂವಿಧಾನ ದೇಶದ ಪವಿತ್ರ ಗ್ರಂಥ ಎಲ್ಲರ ಬದುಕಿನ ಆಸರೆ ಜೊತೆ ಶ್ರೀರಕ್ಷೆ ಕೂಡ ಆಗಿದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷ ಎಲ್ಲಾ ಐದು ಗ್ಯಾರೆಂಟಿಯನ್ನು ಕೊಟ್ಟಿರುವ ರ್‍ಕಾರ ಅದು ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಐದು ಗ್ಯಾರೆಂಟಿ ಬಂದು ರಾಜ್ಯದಲ್ಲಿ ಕಮಲ ದಳ ಉದುರಿ ಹೋದವು, ತೆನೆ ಬಿದ್ದು ಹೋಯಿತು, ಕಾಂಗ್ರೆಸ್ ಹಸ್ತ ಬಲಿಷ್ಠವಾಯಿತು ಎಂದರು.

ರಾಹುಲ್ ಗಾಂಧಿ ಅವರು ಎಲ್ಲಾರಿಗೂ ನ್ಯಾಯ ಒದಗಿಸಬೇಕು ಎಂಬ ದೃಢ ಸಂಕಲ್ಪ ಹೊಂದಿದ್ದಾರೆ. ದೇಶದಲ್ಲಿ ಎಲ್ಲಾರ ಹಿತವ ಕಾಯಲು ನ್ಯಾಯಯಾತ್ರೆ ನಡೆಸುತ್ತಿದ್ದಾರೆ. ದೇಶದಲ್ಲಿ ಜಾತಿ ಗಣತಿ ಮಾಡಲು ಕಾಂಗ್ರೆಸ್ ನವರು ಸಿದ್ಧವಿದ್ದೇವೆ. ಯಾರಿಗೂ ಭಯ ಬೇಡ ನಿಮ್ಮ ಜೊತೆ ಕಾಂಗ್ರೆಸ್ ಪಕ್ಷ ನಿಲ್ಲಲಿದೆ ಎಂಬ ಅಭಯ ನೀಡಿದ್ದಾರೆ.

ಇದೇ ಸಂದರ್ಭದಲ್ಲಿ ಶೋಷಿತ ಸಮುದಾಯದಮುಖಂಡರು,ಹಿಂದುಳಿದ ವರ್ಗಗಳ ಆಯೋಗವು ವರದಿಯನ್ನು ಸ್ವೀಕರಿಸಬೇಕು ಎಂಬ ಮನವಿ ಪತ್ರವನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಸಲ್ಲಿಸಿದರು.

ಸಮಾವೇಶದಲ್ಲಿ ಸಚಿವರುಗಳಾದ ಎಚ್.ಸಿ.ಮಹದೇವಪ್ಪ, ಸತೀಶ್ ಜಾರಕಿಹೊಳಿ, ಬೋಸ್ ರಾಜು, ಕೆ.ಎಚ್.ಮುನಿಯಪ್ಪ, ಬೈರತಿ ಸುರೇಶ್, ಸಂತೋಷ್ ಲಾಡ್, ಮಧು ಬಂಗಾರಪ್ಪ, ಜಮೀರ್ ಅಹಮದ್ , ದಿನೇಶ್ ಗುಂಡೂರಾವ್, ಆರ್. ಬಿ.ತಿಮ್ಮಾಪುರ್, ನಾಗೇಂದ್ರ, ಡಿ.ಸುಧಾಕರ್, ಶಿವರಾಜ್ ತಂಗಡಗಿ, ರಹೀಂಖಾನ್ , ಶಾಸಕರಾದ ಟಿ.ರಘುಮೂರ್ತಿ, ಬಿ.ಜಿ.ಗೋವಿಂದಪ್ಪ, ಎನ್.ವೈ.ಗೋಪಾಲಕೃಷ್ಣ, ನರೇಂದ್ರಸ್ವಾಮಿ, ಶ್ರೀನಿವಾಸ್, ಆನಂದ್, ದೇವೇಂದ್ರಪ್ಪ, ರಾಘವೇಂದ್ರ ಹಿಟ್ನಾಳ್, ಕೆ.ಸಿ.ವೀರೇಂದ್ರ ,ಪ್ರದೀಪ್ ಈಶ್ವರ್,ಪ್ರಕಾಶ್ ರಾಥೋಡ್, ನಾಗರಾಜ್ ಯಾದವ್, ಅಜಯ್ ಸಿಂಗ್ ಮತ್ತು ದಲಿತ ಸಂಘರ್ಷ ಸಮಿತಿ ಮುಖಂಡರಾದ ಮಾವಳ್ಳಿ ಶಂಕರ್, ಮಾಜಿ ಸಚಿವ ಎಚ್.ಎಂ.ರೇವಣ್ಣ, ಎಚ್. ಆಂಜನೇಯ, ಮಾಜಿ ಸಂಸದ ಉಗ್ರಪ್ಪ

ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಅಧ್ಯಕ್ಷರಾದ ರಾಮಚಂದ್ರಪ್ಪ ಅವರು ಅಧ್ಯಕ್ಷತೆ ವಹಿಸಿದ್ದರು.


ಪುಟ 2



# ಜಾತಿಗಣತಿ ನಡೆಸಲು ನಾವು ಬದ್ದ: ಡಿಸಿಎಂ







» ಮೊದಲ ಪುಟದಿಂದ

ಚಿತ್ರದುರ್ಗ ನಗರದ ಮಾದಾರ ಚನ್ನಯ್ಯ ಗುರುಪೀಠ ಪಕ್ಕದ ಮೈದಾನದಲ್ಲಿ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಹಾಗೂ ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ ಆಯೋಜಿಸಿದ್ದ ಶೋಷಿತರ ಜಾಗೃತಿ ಸಮಾವೇಶ ಕಾರ್ಯಕ್ರಮ ದೀಪ ಬೆಳಗಿಸಿ ಡೊಳ್ಳು ಬಾರಿಸುವ ಮೂಲಕ ಸಿಎಂ ಮತ್ತು ಡಿಸಿಎಂ ಉದ್ಘಾಟಿಸಿದರು ಈ ಸಂದರ್ಭದಲ್ಲಿ ರಾಜ್ಯದ ಸಚಿವ ಸಂಪುಟದ ಸಹೋದ್ಯೋಗಿಗಳು ಮಾತನಾಡಿ ಕಾಂತರಾಜ್ ವರದಿ ಜಾರಿಗೆ ಬೆಂಬಲಿಸಿದರು.

ವಸತಿ ಸಚಿವ ಸಚಿವ ಜಮೀರ್ ಅಹಮ್ಮದ್ ಖಾನ್ ಮಾತನಾಡಿ ಕಾಂತರಾಜ್ ವರದಿಗೆ ನನ್ನ ಬೆಂಬಲ ಇದೆ. 8 ತಿಂಗಳಲ್ಲಿ ಬಡವರಿಗೆ ಭಾಗ್ಯಗಳನ್ನು ನೀಡಿದ ಭರವಸೆಯಂತೆ ರಾಜ್ಯದಲ್ಲಿ ಐದು ಗ್ಯಾರೆಂಟಿ ಯೋಜನೆಗಳನ್ನು ಸಂಪೂರ್ಣ ಜಾರಿಗೆ ಮಾಡಿದ್ದೇನೆ. ವಿರೋಧ ಪಕ್ಷದವರು ಅವರ ಕಾಲದಲ್ಲಿ ಒಂದಯ ಮನೆ ನೀಡಿಲ್ಲ.ನಮ್ಮ ಸರ್ಕಾರ 1.83 ಸಾವಿರ ಮನೆಗಳನ್ನು ನೀಡಲು ನಿರ್ಧಾರ ಮಾಡಿದ್ದೇವೆ,ಸದ್ಯ ಐದು ಗ್ಯಾರೆಂಟಿ ಯೋಜನಗೆ 38 ಸಾವಿರ ಕೋಟಿ

ವೆಚ್ಚವಾಗುತ್ತಿದ್ದು ಮುಂದಿನ ಹಣಕಾಸು ವರ್ಷದಲ್ಲಿ 60 ಸಾವಿರ ಕೋಟಿ ಬೇಕು. 36 ಸಾವಿರ ಮನೆಗಳನ್ನು ಫೆ. 24 ತಾರೀಖಿಗೆ ಹಂಚಿಕೆ ಮಾಡಲಿದ್ದೇವೆ. ಬಿಜೆಪಿ ಜಾತಿ ಧರ್ಮದ ಹೆಸರಲ್ಲಿ ರಾಜಕಾರಣ ಮಾಡುತ್ತಿದೆ ಎಂದು ಕುಟುಕಿದರು.

ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಾತನಾಡಿ ನಮ್ಮ ಒಗ್ಗಟ್ಟಿನಿಂದ ಮಾತ್ರ ನಾವು ಕೈಗೊಂಡ ಕಾರ್ಯ ಯಶಸ್ಸು ಸಿಗುತ್ತದೆ. ಯಾವ ಪಕ್ಷಗಳು ಹೆಚ್ಚಿನ ಸಂಖ್ಯೆಯ ಹಿಂದುಳಿದ ವರ್ಗಗಳ ಮುಖ್ಯಮಂತ್ರಿ ನೀಡಿದೆ ಎಂಬುದು ಅರ್ಥ ಮಾಡಿಕೊಂಡು ನಾವು ಮುನ್ನೆಡೆಯಬೇಕು. ಸಂಘಟನೆಯಿಂದ ಮುಂದಿನ ದಿನಗಳಲ್ಲಿ ನಾವು ನಡೆಯಬೇಕು. ಸಿದ್ದರಾಮಯ್ಯ ಅವರಿಗೆ ಬಲ ತುಂಬುವ ಕೆಲಸ ನಾವು ಮಾಡಬೇಕಿದೆ.

ವಿಧಾನ ಪರಿಷತ್ ಸದಸ್ಯ ಪ್ರಕಾಶ್ ರಾಥೋಡ್ ಮಾತನಾಡಿ ಈ ವೇದಿಕೆಯಿಂದ ಒಂದು ಸಂದೇಶ ತಾವು ಕಳಿಸುತ್ತಿದ್ದಿವಿ. ಶೋಷಿತ ವರ್ಗಕ್ಕೆ ಎಲ್ಲಿಯವರೆಗೆ ಸಮಾನತೆ ಸಿಗುವುದಿಲ್ಲವೋ ಅಲ್ಲಿಯವರೆಗೂ ನಾವು ಬದುಕು ಕಟ್ಟಿಕೊಳ್ಳಲು ಆಗಲ್ಲ. ಕಾಂತರಾಜ್ ವರದಿ ಅನುಷ್ಠಾನ ತರಬೇಕು. ಸಮಾಜದಲ್ಲಿ ನಮಗೆ ನ್ಯಾಯ ಒದಗಿಸುವ ದೃಷ್ಟಿಯಿಂದ ಕಾಂತಾರಾಜ್ ವರದಿ ಜಾರಿ ಮಾಡಿ ಎಂದು ಮನವಿ ಮಾಡಿದರು.ಸಣ್ಣ ಸಮುದಾಯಗಳು ಒಗ್ಗಟ್ಟಾಗಿರಬೇಕು ಎಂದು ನಿರ್ಧಾರ ಮಾಡಬೇಕು. ಬಿಜೆಪಿ ಸರ್ಕಾರ ಇಭ್ಭಾಗ ಮಾಡಲು ಪ್ರಯತ್ನಿಸುತ್ತಿದ್ದು ಅದಕ್ಕೆ ಅವಕಾಶ ನೀಡಬಾರು ಎಂದರು.

ಸಚಿವ ಶಿವರಾಜ್ ತಂಗಡಗಿ ಮಾತನಾಡಿ ಯಾರು ಕಾಂತರಾಜ್ ವರದಿ ವಿರೋಧ ಮಾಡಿದವರಿಗೆ ಈ ದಿನ ಶಾಕ್ ಆಗಿದೆ. ಸಿದ್ದರಾಮಯ್ಯ ಅವರ ಸರ್ಕಾರವನ್ನು ಎಲ್ಲಾರೂ ಗಮನಿಸುತ್ತಿದ್ದಾರೆ. ರಾಜ್ಯದ ಮುಖ್ಯಮಂತ್ರಿ ಅವರು ಶೋಷಿತ ವರ್ಗದ ಪರವಾಗಿದ್ದಾರೆ. ಕೇಂದ್ರ ಸರ್ಕಾರ ಬೆಲೆ ಮಾತನಾಡುತ್ತಿದೆ. ಶೋಷಿತರನ್ನು ಒಗ್ಗೂಡಿಸುವ ಕೆಲಸ ನಾವು ಮಾಡಿದ್ದೇವೆ. ಶೋಷಿತರು ಒಂದಾಗಬೇಕು. ಒಂದಾದರೆ ಶೋಷಿತರು ದೇಶದ ಪ್ರಧಾನಿ ಆಗಬೇಕಿದೆ. ಒಬ್ಬ ಸಂಸದರು ನಾವು ಅಧಿಕಾರಕ್ಕೆ ಬಂದಿದ್ದೆ ಸಂವಿಧಾನ ತೆಗೆದು ಹಾಕಲು, ತಿದ್ದುಪಡಿ ಮಾಡುತ್ತೇನೆ ಎಂಬುವವರಿಗೆ ಬುದ್ದಿ ಕಲಿಸುವ ಕೆಲಸ ಆಗಬೇಕಿದೆ.

ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಮಾತನಾಡಿ ನಾವು ಈ ರಾಷ್ಟ್ರಕ್ಕೆ ಸ್ವಾತಂತ್ರ್ಯ ತರುವಾಗ ತ್ಯಾಗ ಬಲಿದಾನ ಮಾಡುವ ಮೂಲಕ ಸ್ವಾತಂತ್ರ್ಯ ತಂದರು. ದೇಶದ ಕಟ್ಟ ಕಡೆಯ ವ್ಯಕ್ತಿಗೆ ಸಮಾನವಾದ ಹಕ್ಕನ್ನು ಪಡೆಯಲು ಅಂಬೇಡ್ಕರ್ ಸಂವಿಧಾನ ರಚಿಸಲಾಯಿತು. ಸಂವಿಧಾನ 24.1 ಎಸ್ಸಿ ಎಸ್ಟಿ ಮೀಸಲಾತಿ ನೀಡಿ ಕಳೆದ ಬಾರಿ ದೊಡ್ಡ ತಿರ್ಮಾನವನ್ನು ಸಿದ್ದರಾಮಯ್ಯ ಸರ್ಕಾರ ಮಾಡಿತ್ತು.

ಸಚಿವ ಬಿ.ನಾಗೇಂದ್ರ ಮಾತನಾಡಿ ಕಾಂಗ್ರೆಸ್ ಸರ್ಕಾರ ಶೋಷಿತರ ಬೆನ್ನೆಲುಬಾಗಿ ನಿಂತಿದೆ. ಕೇಂದ್ರ ಮತ್ತು ರಾಜ್ಯದ ಕೋಮುವಾದಿಗಳಿಗೆ ಶೋಷಿತರ ಸಮಾವೇಶದಿಂದ ನಡುಕ ಶುರುವಾಗಿದೆ. ನಾಳೆಯಿಂದ ಈ ಒಗ್ಗಟ್ಟಿಗೆ ಹುಳಿ ಹಿಂಡುವ ಕೆಲಸ ಕೋಮುವಾದಿಗಳು ಮಾಡಲು ಪ್ರಯತ್ನಿಸುತ್ತಾರೆ. ರಾಜ್ಯದಲ್ಲಿ ಮುಂಬರುವ ಲೋಕಸಭೆ ಚುನಾವಣೆಯಲ್ಲಿ 28 ಸೀಟುಗಳನ್ನು ಗೆಲ್ಲಿಸಿಕೊಂಡು ಬರುತ್ತೇವೆ. ಮುಖ್ಯಮಂತ್ರಿ ಅವರ ಪರವಾಗಿ ಶೋಷಿತರು, ಹಿಂದುಳಿದವರು, ಅಲ್ಪಸಂಖ್ಯಾತ ಸಮಾಜ ನಿಂತಿದೆ.ನಾವು ಕಾಂತರಾಜ್ ವರದಿಯನ್ನು ಸ್ವೀಕರಿಸಿ ಜಾರಿಗೊಳಿಸುತ್ತೇನೆ.

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿ ಶೋಷಿತರು ಸೌಲಭ್ಯಗಳಿಂದ ವಂಚಿತರಾಗಿದ್ದು ಸೌಲಭ್ಯ ಪಡೆಯಲು ಶೋಷಿತರು ಹೋರಟ ಮಾಡಬೇಕು. ಹೋರಟದಿಂದ ಮಾತ್ರ ನಾವು ಸೌಲಭ್ಯ ಪಡೆಯಲು ಸಾಧ್ಯ. ಮುಂದಿಬ ದಿನಗಳಲ್ಲಿ ನಾವೆಲ್ಲರೂ ಒಗ್ಗಟ್ಟು ಪ್ರದರ್ಶನ ಮಾಡುವ ಮೂಲಕ ಸಿದ್ದರಾಮಯ್ಯ ಅವರಿಗೆ ಸೈನಿಕರಂತೆ ಜೊತೆಯಾಗಿ ನಿಲ್ಲಬೇಕು. ಅರಸು ಮತ್ತು ಬಂಗಾರಪ್ಪ ಅವರ ನಂತರ ಬಂದಂತಹ ಹಿಂದುಳಿದ ವರ್ಗಗಳ ಪರ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಕೆಲಸ ಮಾಡುತ್ತಿದ್ದಾರೆ.ಪರಿಶಿಷ್ಟ ಜಾತಿ, ಪರಿಶಿಷ್ಟವರ್ಗ,ಹಿಂದುಳಿದವರ್ಗಕ್ಕೆನ್ಯಾಯ ಒದಗಿಸುವ ಕೆಲಸ ಕಾಂಗ್ರೆಸ್ ಮಾಡುತ್ತಿದೆ. ಬರುವ ಚುನಾವಣೆಯಲ್ಲಿ ನಮ್ಮ ಪರವಾಗಿ ಎಲ್ಲಾ ಶೋಷಿತರು ಒಗ್ಗಟ್ಟಿನಿಂದ ಬೆಂಬಲಿಸಲು ಜಾಗೃತರಾಗಬೇಕು ಎಂದು ತಿಳಿಸಿದರು.

## ಸಂವಿಧಾನ ಬದಲಾಯಿಸುತ್ತೇವೆ ಎನ್ನುವವರಿಗೆ ತಕ್ಕ ಪಾಠ ಕಲಿಸಿ: ಸಿ.ಎಂ ಸಿದ್ದರಾಮಯ್ಯ ಕರೆ

» ಮೊದಲ ಪುಟದಿಂದ

ಈ ಜಾತಿ ತಾರತಮ್ಯದಿಂದಲೇ ದೇಶದಲ್ಲು ಶೋಷಣೆ ಮುಂದುವರೆದಿದೆ. ಈ ಜಾತಿ ಶೋಷಣೆಗೆ ಕೊನೆ ಹಾಡುವ ಉದ್ದೇಶದಿಂದಲೇ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನ ನೀಡಿದರು. ಸಾಹಿ ಮಹಾರಾಜ್, ಜ್ಯೋತಿಬಾ ಫುಲೆ, ಬುದ್ದ, ಬಸವಣ್ಣ, ನಾರಾಯಣಗುರು, ನಾಲ್ವಡಿ ಅರಸರು, ವಿವೇಕಾನಂದ, ಕನಕದಾಸರೆಲ್ಲರೂ ಈ ಜಾತಿ ವ್ಯವಸ್ಥೆ ತೊಡೆದು ಹಾಕಲು ಶ್ರಮಿಸಿದರು. ನಮ್ಮ ಸಂವಿಧಾನ ಕೂಡ ಈ ಎಲ್ಲಾ ಮಹನೀಯರ ಆಶಯಗಳನ್ನು ಒಳಗೊಂಡಿದೆ ಎಂದರು. ಈ ಕಾರಣಕ್ಕೇ ಪಟ್ಟ ಭದ್ರ ಹೊತಾಸಕ್ತಿಗಳು, ದುಷ್ಟ ಶಕ್ತಿಗಳು ಸಂವಿಧಾನ ಬದಲಾಯಿಸುವ ಮೂಲಕ ಮತ್ತೆ ಶೋಷಣೆ, ಮೌಢ್ಯದ ದರ್ಬಾರ್ ಮುಂದುವರೆಸಲು ಯತ್ನಿಸುತ್ತಿದ್ದಾರೆ. ಒಂದು ಕಡೆ ಸಂವಿಧಾನ ಬದಲಾಯಿಸಲು ಹುನ್ನಾರ ನಡೆಸುತ್ತಿದ್ದಾರೆ ಮತ್ತೊಂದು ಕಡೆ ನಾಲ್ವಡಿ ಅರಸು ಮತ್ತು ಅಂಬೇಡ್ಕರ್, ಸಾಹು ಮಹಾರಾಜ್ ಪ್ರತಿಪಾದಿಸಿದ ಮೀಸಲಾತಿಯನ್ನೂ ವಿರೋಧಿಸುತ್ತಿದ್ದಾರೆ. ಆದ್ದರಿಂದ ಸಂವಿಧಾನ ವಿರೋಧಿಗಳಿಗೆ ತಕ್ಕ ಪಾಠ ಕಲಿಸಬೇಕು ಎಂದು ಕರೆ ನೀಡಿದರು.





## ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ ವಜಾ ಮಾಡಿ: ಹೆಚ್ಡಿಕೆ

» ಬೆಂಗಳೂರು



ರಾಷ್ಟ್ರಪತಿ ದ್ರೌಪದಿ ಮುರ್ಮು ಆವರನ್ನು ಏಕವಚನದಲ್ಲಿ (ಆ ಪದವನ್ನು ಬರೆಯಲಾರೆ) ತುಚ್ಛವಾಗಿ ಸಂಬೋಧಿಸಿದ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಹುದ್ದೆಯಿಂದ ಕೂಡಲೇ ವಜಾ ಮಾಡಬೇಕು ಎಂದು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಆಗ್ರಹಿಸಿದ್ದಾರೆ.ಡೋಂಗಿ ಪ್ರಜಾಪ್ರಭುತ್ವವಾದಿಯ ಅಸಲಿ ಮುಖ ಕಳಚಿಬಿದ್ದಿದೆ.ಒಂದು ಕ್ಷಣವೂ ಮುಖ್ಯಮಂತ್ರಿ ಪದವಿಯಲ್ಲಿ ಇರಲು ಅವರು ಅರ್ಹರಲ್ಲ. ಕೂಡಲೇ ತಾವೆಸಗಿರುವ ಅಪಚಾರಕ್ಕೆ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಅಥವಾ ರಾಜ್ಯಪಾಲರೇ ಅವರನ್ನು ಮುಖ್ಯಮಂತ್ರಿ ಕುರ್ಚಿ ಯಿಂದ ಕಿತ್ತೆಸೆಯಬೇಕು ಎಂದು ಒತ್ತಾಯಿಸಿದ್ದಾರೆ. ಶೋಷಿತ ಬುಡಕಟ್ಟು ಸಮುದಾಯದಿಂದ ಬಂದ ದೇಶದ ಮೊತ್ತ ಮೊದಲ ರಾಷ್ಟ್ರಪತಿಗಳು, ಅದರಲ್ಲಿಯೂ ಮಹಿಳೆ. ಶೋಷಿತರ ಜ್ಯಾತಿ ಸಮಾವೇಶದಲ್ಲೇ ಅವರಿಗೆ ಮುಖ್ಯಮಂತ್ರಿ ಅಪಮಾನ ಎಸಗಿದ್ದಾರೆ. ಸಾರ್ವಜನಿಕ ವೇದಿಕೆಯಲ್ಲಿ ಗೌರವಾನ್ವಿತ ರಾಷ್ಟ್ರಪತಿಗಳನ್ನು ಮುಖ್ಯಮಂತ್ರಿಯೊಬ್ಬರು ಸಂಬೋಧಿಸುವ ರೀತಿಯೇ ಇದು. ಸಿದ್ದರಾಮಯ್ಯ ಅವರ ನಡವಳಿಕೆ ಕರ್ನಾಟಕಕ್ಕೆ ಅಂಟಿದ ಅಳಿಸಲಾಗದ ಕಳಂಕ. ಅವರ ಈ ಕೀಳುಮಾತು ದೇಶಕ್ಕೆ, ಸಂವಿಧಾನಕ್ಕೆ ಆಗಿರುವ ಘೋರ ಅಪಚಾರ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಚಾಮರಾಜನಗರದಲ್ಲಿ ಸಿದ್ದರಾ ಮಯ್ಯ ಅವರ ಸುಪುತ್ರ ಯತೀಂದ್ರ ಭಾಷಣ ಮಾಡುತ್ತಿದ್ದಾಗ ಯಾರೋ ಒಬ್ಬರು ಏಕವಚನದಲ್ಲಿ ಪ್ರಶ್ನಿಸಿದರೆಂಬ ಕಾರಣಕ್ಕೆ ಪೊಲೀಸರು ಆತನನ್ನು ಅಟ್ಟಾಡಿಸಿಕೊಂಡು ಹೋಗಿ ಬಂಧಿಸಿ ದರದರನೇ ಎಳೆದುಕೊಂಡು ಹೋದರು. ಹಾಗಿದ್ದರೆ, ರಾಷ್ಟ್ರಪತಿಗಳನ್ನೇ ಏಕವಚನದಲ್ಲಿ ಸಂಬೋಧಿಸಿದ ಈ ಮುಖ್ಯಮಂತ್ರಿಗೇನು ಶಿಕ್ಷೆ?ಎಂದು ಪ್ರಶ್ನಿಸಿದ್ದಾರೆ.

## ಸಚಿವ ಕೆ.ಎನ್.ರಾಜಣ್ಣ ಹೇಳಿಕೆಯನ್ನ ಹೈಕಮಾಂಡ್ ನೋಡಿಕೊಳ್ತದೆ: ಡಿಕೆಶಿ

» ಬೆಂಗಳೂರು



ದೆಹಲಿಯಲ್ಲಿ ಕುಳಿತು ಪಕ್ಷದ ನಾಯಕರು ಸಿದ್ಧಪಡಿಸಿದ ಪಟ್ಟಿಯನ್ನು ಒಪ್ಪಿಕೊಳ್ಳಲು ನಾವು ಗುಲಾಮರೇ ಎಂಬ ಸಚಿವ ಕೆಎನ್ ರಾಜಣ್ಣ ಅವರ ಹೇಳಿಕೆಯನ್ನು ಹೈಕಮಾಂಡ್ ಗಂಭೀರವಾಗಿ ಪರಿಗಣಿಸಿದೆ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಹೇಳಿದರು.

ರಾಜಣ್ಣ ಅವರ ಹೇಳಿಕೆಗೆ ಲೇವಡಿ ಮಾಡುತ್ತಾ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್, ರಾಜಣ್ಣ ಅವರ ಹೇಳಿಕೆಯನ್ನು ಗಂಭೀರವಾಗಿ ಪರಿಗಣಿಸಿದ್ದು, ಸಿಎಂ ಈ ಬಗ್ಗೆ ಮಾತನಾಡಿದ್ದಾರೆ. ಅವರು ಶಾಸಕರು ಮತ್ತು ಸಚಿವರಾಗಿರುವುದರಿಂದ ಎಐಸಿಸಿ ಗೌರವಯುತವಾಗಿ ಪರಿಶೀಲಿಸುತ್ತದೆ ಎಂದು ಹೇಳಿದರು.

ನಿಗಮ–ಮಂಡಳಿ ಮತ್ತು ನಿಗಮಗಳ ಮುಖ್ಯಸ್ಥರ ನೇಮಕಕ್ಕೆ ಸಂಬಂಧಿಸಿದಂತೆ ರಾಜ್ಯ ನಾಯಕರ ಸಲಹೆ ಪಡೆಯದ ಕಾಂಗ್ರೆಸ್ ಹೈಕಮಾಂಡ್ ವಿರುದ್ಧ ಗೃಹ ಸಚಿವ ಡಾ.ಜಿ.ಪರಮೇಶ್ವರ ಆಕ್ರೋಶ ವ್ಯಕ್ತಪಡಿಸಿದ್ದರು. ಇದರ ಬೆನ್ನಲ್ಲೇ, ಸಹಕಾರ ಸಚಿವ ಕೆ.ಎನ್. ರಾಜಣ್ಣ ಕೂಡ ಪಕ್ಷದ ಕೇಂದ್ರ ನಾಯಕರ ವಿರುದ್ಧ ಧ್ವನಿ ಎತ್ತಿದ್ದರು.

ಯಾರು ಕೆಲಸ ಮಾಡುತ್ತಿದ್ದಾರೆ ಮತ್ತು ಅವರ ಸಾಮರ್ಥ್ಯ ಏನು ಎಂದು ಪಕ್ಷದ ಹೈಕಮಾಂಡ್ ನಮ್ಮನ್ನು ಕೇಳಬೇಕು ಮತ್ತು ನಂತರ ನೇಮಕಾತಿಗಳನ್ನು ಮಾಡಬೇಕು. ದೆಹಲಿಯಲ್ಲಿ ಕುಳಿತು ಪಕ್ಷದ ನಾಯಕರು ಸಿದ್ಧಪಡಿಸಿದ ಪಟ್ಟಿಯನ್ನು ಒಪ್ಪಿಕೊಳ್ಳಲು ನಾವು ಗುಲಾಮರೇ? ಅದು ಯಾವುದೇ ಜಿಲ್ಲೆಯಾಗಿರಬಹುದು. ನೇಮಕಾತಿ ಮಾಡುವ ಮೊದಲು ಆಯಾ ಜಿಲ್ಲೆಗಳ ಉಸ್ತುವಾರಿಗಳನ್ನು ಕೇಳಬೇಕು. ಅವರು ಕೇವಲ ಲಾಟರಿಯಂತೆ ನೇಮಕಾತಿಗಳನ್ನು ಮಾಡಿದರೆ ಕೇಳುವವರಾರು? ಅದನ್ನು ಒಪ್ಪಲು ಸಾಧ್ಯವಿಲ್ಲ" ಎಂದು ಹೈಕಮಾಂಡ್ ನಾಯಕರ ವಿರುದ್ಧ ಕಿಡಿಕಾರಿದ್ದರು

**ಪ್ರಮುಖ ಸುದ್ದಿ**

## ಶೂನ್ಯ ಮಾಸದಲ್ಲಿ ರಥವೇರಿದ ದೇವಪುರದ ಕೆರೆಯಾಗಳಮ್ಮ

» ಹೊಸದುರ್ಗ

ಶೂನ್ಯ ಮಾಸ ವಿರಾಮದ ಮಾಸವಿದ್ದಂತೆ. ಈ ಸಮಯದಲ್ಲಿ ಯಾವುದೇ ಶುಭ ಸಮಾರಂಭಗಳು ನಡೆಯುವುದಿಲ್ಲ. ಆದರೆ, ತಾಲ್ಲೂಕಿನ ದೇವಪುರ ಗ್ರಾಮದೇವತೆ ಕೆರೆಯಾಗಳಮ್ಮ ದೇವಿ ಶೂನ್ಯ ಮಾಸದ ಶನಿವಾರ ನಸುಕಿನಲ್ಲಿ ನೂರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ರಥೋತ್ಸವ ನಡೆದಿದೆ.

ಜಾತ್ರೋತ್ಸವಕ್ಕೂ ಮುನ್ನ ದೇವಿಯೂ ಹೊನ್ನೇನಹಳ್ಳಿ, ನಾಗತಿಹಳ್ಳಿ, ಮಸಣಿಹಳ್ಳಿ, ಕೋಡಿಹಳ್ಳಿ, ಯಲ್ಲಾಭೋವಿಹಟ್ಟಿ, ಮೂಡ್ಲಭೋವಿಹಟ್ಟಿ, ದೇವರಹಟ್ಟಿ, ಬೆನಕನಹಳ್ಳಿ, ನರಸೀಪುರ ಸೇರಿದಂತೆ ವಿವಿಧ ಹಳ್ಳಿಗಳಿಗೆ ಸೆಳೆ (ಸುತ್ತಲಿನ ಗ್ರಾಮಗಳಿಗೆ ತೆರಳಿ ಭಕ್ತರಿಂದಸೇವೆಸ್ವೀಕರಿಸುವುದು)ಹೋಗುವುದು ಇಲ್ಲಿನ ವಿಶೇಷ ಸಂಪ್ರದಾಯವಾಗಿದೆ.

ರಥೋತ್ಸವದ ಅಂಗವಾಗಿ ಸೋಮವಾರದಿಂದ ವಿವಿಧ ಕಾರ್ಯಕ್ರಮಗಳು ನಡೆದಿವೆ. ಮಂಗಳವಾರ ಭಾನೋತ್ಸವ, ಬುಧವಾರ ಕೇಲುಬಾನೋತ್ಸವ, ಗುರುವಾರ ಹೂವಿನಪಲ್ಲಕ್ಕಿ ಉತ್ಸವ, ಶುಕ್ರವಾರ ಆನೆ ಮತ್ತು ಕುದುರೆ ಉತ್ಸವ ನಡೆದಿದೆ. ಶುಕ್ರವಾರ ಸಂಜೆ ಗ್ರಾಮಸ್ಥರೆಲ್ಲಾ ಸಿಹಿ



ಅಡುಗೆ ತಯಾರಿಸಿ, ರಥೋತ್ಸವಕ್ಕೆ ನೈವೇದ್ಯ ಅರ್ಪಿಸಿದರು. ಶನಿವಾರ ನಸುಕಿನಲ್ಲಿ ದೇವಿ ರಥ ಏರಿತು. ಸೋಮ (ಚೋಮನ) ಕುಣಿತ ವಿಶೇಷವಾಗಿದ್ದು, ನೋಡುಗರ ಗಮನ ಸೆಳೆಯುವಂತಿತ್ತು.

'ಜಾತ್ರಾಮಹೋತ್ಸವಆರಂಭವಾದಾಗಿನಿಂದ ದೇವಪುರದಲ್ಲಿ ಭಕ್ತರ ಓಡಾಟ ತುಸು ಜೋರಾಗಿಯೇ ಇರುತ್ತದೆ. ಗ್ರಾಮದ ಮದುವೆಯಾಗಿರುವ ಹೆಣ್ಣು ಮಕ್ಕಳು ತಪ್ಪದೆ ರಥೋತ್ಸವಕ್ಕೆ ಬರುತ್ತಾರೆ. ಅವರು ದೇವಿಗೆ ಮಂಗಳಾರತಿ ಮಾಡಿ, ಮಡಿಲಕ್ಕಿ ನೀಡುವುದು ಹಲವು ವರ್ಷಗಳಿಂದ ಬಂದಿರುವ ಪದ್ಧತಿಯಾಗಿದೆ. ಹರಕೆ ಫಲಿಸಿದ ಭಕ್ತರು ರಥೋತ್ಸವದ ಸಮಯದಲ್ಲಿ ಬಾಳೆಹಣ್ಣು, ಮೆಣಸು, ನಾಣ್ಯ ಹಾಕುವುದರ ಮೂಲಕ ಭಕ್ತಿ ಸಮರ್ಪಿಸುವರು. ಅಮ್ಮನವರು ರಥವೇರಿದರೆ ಶೂನ್ಯ ಮಾಸ ಮುಗಿದಂತೆ. ನಂತರ ಶುಭ ಕಾರ್ಯಗಳು ಜರುಗುತ್ತವೆ ಎನ್ನುತ್ತಾರೆ ದೇವಪುರ ಗ್ರಾಮದ ಕುಮಾರ್'.ರಥೋತ್ಸವಕ್ಕೆ ಸುತ್ತಮುತ್ತಲಿನ ಗ್ರಾಮಸ್ಥರು ಮಾತ್ರವಲ್ಲದೇ, ಬೆಂಗಳೂರು,ಹುಬ್ಬಳ್ಳಿ,ಚಿತ್ರದುರ್ಗ,ದಾವಣಗೆರೆ ಸೇರಿದಂತೆ ಹೊರ ಜಿಲ್ಲೆಗಳಿಂದಲೂ ಅಪಾರ ಭಕ್ತ ಸಮೂಹ ಆಗಮಿಸಿ, ದೇವಿಯ ಕೃಪೆಗೆ ಪಾತ್ರರಾಗುವರು.

**ಫಾಸ್ಟ್ ನ್ಯೂಸ್**

### ಫೆ.1ಕ್ಕೆ ಮಡಿವಾಳ ಮಾಚಿದೇವರ ಜಯಂತಿ

» ದಾವಣಗೆರೆ

ವಚನ ಸಾಹಿತ್ಯ ರಕ್ಷಕ, ಗಣಾಚಾರ ಸಂಪನ್ನ, ವೀರ ಶರಣ ಶ್ರೀ ಮಡಿವಾಳ ಮಾಚಿದೇವರ ಜಯಂತಿಯನ್ನು ಫೆಬ್ರವರಿ 1ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸರಳವಾಗಿ ಆಚರಿಸಲಾಗುವುದು ಎಂದು ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಂಘ ತಿಳಿಸಿದೆ.ರಾಜ್ಯದಲ್ಲಿ ಬರಗಾಲ ಘೋಷಣೆ ಆಗಿರುವ ಹಿನ್ನೆಲೆಯಲ್ಲಿ ಮಾಚಿದೇವ ಜಯಂತಿಯನ್ನು ಸರಳವಾಗಿ ಆಚರಿಸಲು ಸರ್ಕಾರ ನಿರ್ಧರಿಸಿದ್ದ ಹಿನ್ನೆಲೆಯಲ್ಲಿ ಫೆ.1ರಂದು ನಡೆಯುವ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸರಳವಾಗಿ ಆಚರಿಸಿ, ಮಡಿವಾಳ ಮಾಚಿದೇವರಿಗೆ ಪುಷ್ಪಾರ್ಚನೆ, ಪೂಜೆ ಸಲ್ಲಿಸುವ ಮೂಲಕ ಆಚರಿಸಲಾಗುವುದು. ಈ ವೇಳೆ ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಮಡಿವಾಳ ಮಾಚಿದೇವ ಸಂಘದ ಜಿಲ್ಲಾಧ್ಯಕ್ಷ ಎಂ.ನಾಗೇಂದ್ರಪ್ಪ ಸೇರಿದಂತೆ ಜಿಲ್ಲಾ ಸಂಘದ ಪದಾಧಿಕಾರಿಗಳು, ಸದಸ್ಯರು ತಿಳಿಸಿದ್ದಾರೆ.

### ನಿಗಮ-ಮಂಡಳಿ ಅಧಿಕಾರ 2 ವರ್ಷ ಮಾತ್ರ ಏಕೆ?

» ಬೆಂಗಳೂರು

ಪಕ್ಷಕ್ಕಾಗಿ ದುಡಿದ ಎಲ್ಲಾ ಶಾಸಕರು, ಕಾರ್ಯಕರ್ತರಿಗೂ ಅಧಿಕಾರ ಸಿಗಲಿ ಎಂದು ನಿಗಮ ಮಂಡಳಿಗಳಿಗೆ ಎರಡು ವರ್ಷ ಅವಧಿಯ ಸೂತ್ರವನ್ನು ಹೈಕಮಾಂಡ್ ಮಾಡಿದೆ ಅಂತ ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದ್ದಾರೆ. ನಿಗಮ ಮಂಡಳಿ ಅಧಿಕಾರವಧಿಯನ್ನು ಎರಡು ವರ್ಷ ಮೀಸಲಿಗೆ ಕೆಲ ಶಾಸಕರ ವಿರೋಧ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಪಕ್ಷದ ಎಲ್ಲರಿಗೂ ಅವಕಾಶ ದೊರೆಯಬೇಕು. ಇತರರಿಗೂ ಅಧಿಕಾರ ಹಂಚಬೇಕು. ಆದ ಕಾರಣ 2 ವರ್ಷ ಮಾತ್ರ ಅಧಿಕಾರವಧಿ ಎಂದು ಹೇಳಿದ್ದೇವೆ ಎಂದರು. ಹೈಕಮಾಂಡ್ ಕೊಟ್ಟಿರುವ ಸೂತ್ರವನ್ನು ನಾವು ಜಾರಿಗೆ ತಂದಿದ್ದೇವೆ. ಇಲ್ಲಿ ಸಿದ್ದರಾಮಯ್ಯ ಅವರದ್ದು ಏನೂ ಇಲ್ಲ, ನನ್ನದೂ ಏನೂ ಇಲ್ಲ. ಪಕ್ಷ ಅಧಿಕಾರಕ್ಕೆ ಬರಲು ಸಾಕಷ್ಟು ಕಾರ್ಯಕರ್ತರು ದುಡಿದಿದ್ದಾರೆ. ಆದ ಕಾರಣ ಎಲ್ಲರಿಗೂ ಅವಕಾಶ ನೀಡಬೇಕು. ಈ ನಿಟ್ಟಿನಲ್ಲಿ ಹೈಕಮಾಂಡ್ ಹೇಳಿದ ಹಾಗೆ ಎರಡು ವರ್ಷಕ್ಕೆ ಅಧಿಕಾರ ಸೀಮಿತ ಮಾಡಿದ್ದೇವೆ ಅಂತ ಸಮರ್ಥನೆ ನೀಡಿದರು.

### ಪಕ್ಷ ತೊರೆಯುವವರನ್ನು ತಡೆಯಲಾಗದು: ಸತೀಶ್ ಜಾರಕಿಹೊಳಿ

» ಹಾವೇರಿ

ಪಕ್ಷವನ್ನು ತೊರೆದು ಹೋಗುವವರನ್ನು ತಡೆದು ನಿಲ್ಲಿಸಲು ಆಗುವುದಿಲ್ಲ. ಕಾಂಗ್ರೆ□□ನಿಂದ ಬೇರೆ ಯಾರೂ ಹೋಗುತ್ತಾರೆಂದು ಹೇಳಲು ಸಾಧ್ಯವಿಲ್ಲ. ಮಾಜಿ ಸಿಎಂ ಜಗದೀಶ್ ಶೆಟ್ಟರ್ ಇದೀಗ ಪಕ್ಷ ತೊರೆದಿದ್ದಾರೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ಶನಿವಾರ ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಮುಂಬರಲಿರುವ ಲೋಕಸಭಾ ಚುನಾವಣೆಯಲ್ಲಿ ಶೆಟ್ಟರ್ ಯಾವ ಕ್ಷೇತ್ರದಲ್ಲಿ ನಿಲ್ಲುತ್ತಾರೆಂಬುದು ಅವರಿಗೆ ಬಿಟ್ಟಿರುವ ವಿಚಾರ. ಲಿಂಗಾಯತ ಸಮುದಾಯ ಯಾರಿಗೆ ಮತ ಹಾಕುತ್ತಾರೆಂಬುದು ಈಗಲೇ ಹೇಳಲು ಆಗದು ಎಂದರು.ಪಕ್ಷ ದೊಡ್ಡದು: ಕಾಂಗ್ರೆಸ್ ಪಕ್ಷದಲ್ಲಿದ್ದವರು ಕಾಂಗ್ರೆ□□ನಲ್ಲಿಯೇ ಇರುತ್ತಾರೆಂಬ ಆಶಾಭಾವನೆ ನಮಗಿದೆ. ಶೆಟ್ಟರ್ ಇನ್ನೂ ಸ್ವಲ್ಪ ದಿನ ಕಾಂಗ್ರೆ□□ನಲ್ಲಿ ಇರಬೇಕಿತ್ತು. ಅವರು ಹೋಗಿದ್ದು ನಮ್ಮ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಅವರು ಬೆಳಗಾವಿಯಲ್ಲಿ ಸ್ಪರ್ಧಿಸಿದರೇ ಆ ವೇಳೆ ಏನು ಮಾಡಬೇಕೆಂದು ತೀರ್ಮಾನ ಮಾಡುತ್ತೇವೆ. ವ್ಯಕ್ತಿಗಿಂತ ಪಕ್ಷ ದೊಡ್ಡದು' ಎಂದು ಅವರು ತಿಳಿಸಿದರು.

### ಮುಖ್ಯಮಂತ್ರಿಯಿಂದ ರಾಷ್ಟ್ರಪತಿಗೆ ಅಗೌರವ: ಕ್ಷಮಾಪಣೆಗೆ ಆಗ್ರಹ

» ಚಳ್ಳಕೆರೆ



ರಾಷ್ಟ್ರದ ಸಂವಿಧಾನದಲ್ಲಿ ರಾಷ್ಟ್ರಪತಿ ಹುದ್ದೆ ಮತ್ತು ಅದನ್ನು ಅಲಂಕರಿಸಿ ಕಾರ್ಯನಿರ್ವಹಿಸುತ್ತಿರುವವರಿಗೆ ವಿಶೇಷವಾದ ಗೌರವವನ್ನು ನಮ್ಮ ಸಂವಿಧಾನ ನೀಡಿದೆ. ಆದರೆ, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ನಡೆದ ಶೋಷಿತರ ಸಮಾವೇಶದಲ್ಲಿ ಕಳೆದ 22ರಂದು ಅಯೋಧ್ಯೆಯಲ್ಲಿ ಪ್ರತಿಷ್ಠಾಪನೆಯಾದ ಬಾಲರಾಮನ ಕಾರ್ಯಕ್ರಮಕ್ಕೆ ಆಹ್ವಾನಿಸಿಲ್ಲವೆಂದು ಹೇಳುವ ಸಂದರ್ಭದಲ್ಲಿ ರಾಷ್ಟ್ರಪತಿಯವರನ್ನು ಅವಳು ಎಂದು ಲಘುವಾಗಿ ಮಾತನಾಡಿರುವುದು ಸರಿಯಲ್ಲ. ರಾಜ್ಯದ ಮುಖ್ಯಮಂತ್ರಿ ಸ್ಥಾನದ ಗೌರವ, ಘನತೆಗೆ ದಕ್ಕೆ ತರುವಂತೆ ಮುಖ್ಯಮಂತ್ರಿಗಳು ಮಾತನಾಡಿದ್ದು ನೋವಿನ ಸಂಗತಿ. ರಾಷ್ಟ್ರಪತಿಯಂತಹ ಉನ್ನತ್ತಸ್ಥಾನದಲ್ಲಿರುವ ಮಹಿಳೆಗೆ ಮಾಡಿದ ಅವಮಾನವಾಗಿದೆ. ಈ ಬಗ್ಗೆ ಮುಖ್ಯಮಂತ್ರಿಗಳು ಕ್ಷಮಾಪಣೆ ಕೇಳಬೇಕೆಂದು ಜಿಲ್ಲಾ ಬಿಜೆಪಿ ಯುವ ಮೋರ್ಚಾ ಮಾಜಿ ಅಧ್ಯಕ್ಷ ಟಿ.ಮಂಜುನಾಥ ಒತ್ತಾಯಿಸಿದ್ಧಾರೆ.

# ದೇಶದ ಧ್ವಜ ಬಿಟ್ಟು ಭಾಗವಧ್ವಜ ಹಾರಿಸಿದ್ದು ಸರಿಯಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ

» **ಚಿತ್ರದುರ್ಗ**

ಭಾರತ ದೇಶದ ಧ್ವಜ ಹಾರಿಸುವುದು ಬಿಟ್ಟು ಭಾಗವಧ್ವಜ ಹಾರಿಸಿದ್ದು ಸರಿಯಲ್ಲ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಚಿತ್ರದುರ್ಗದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು. ಮಂಡ್ಯ ಜಿಲ್ಲೆಯ ಗ್ರಾಮವೊಂದರಲ್ಲಿ ಹನುಮಧ್ವಜ ಕಿತ್ತುಹಾಕಿರುವುದಕ್ಕೆ ವಿರೋಧಪಕ್ಷದ ನಾಯಕ ಆರ್. ಅಶೋಕ್ ಭೇಟಿ ನೀಡುತ್ತಿರುವ ಬಗ್ಗೆ ಮಾತನಾಡಿ ನಮ್ಮ ದೇಶದ ಬಾವುಟ ಹಾರಿಸಬೇಕು ಎಂದರು. ಶ್ಯಾಮನೂರು ಶಿವಶಂಕರಪ್ಪನವರು ಶಿವಮೊಗ್ಗದಲ್ಲಿ ಬಿ.ವೈ.ರಾಘವೇಂದ್ರ ಅವರೇ ಗೆಲ್ಲಲಿ ಎಂದು ಹೇಳಿಕೆ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ನನಗೆ ಗೊತ್ತಿಲ್ಲ, ಅವರೊಂದಿಗೆ ಮಾತನಾಡುತ್ತೇನೆ ಎಂದರು.

**ಲೋಕಸಭಾ ಚುನಾವಣೆಯಲ್ಲಿ 15- 20 ಸ್ಥಾನಗಳನ್ನು ಗೆಲ್ಲುವ ವಿಶ್ವಾಸ:**

ಲೋಕಸಭಾ ಚುನಾವಣೆಯಲ್ಲಿ 15-20 ಸ್ಥಾನಗಳನ್ನು ಗೆಲ್ಲುವ ವಿಶ್ವಾಸವನ್ನು ವ್ಯಕ್ತಪಡಿಸಿದರು. ಬಿಜೆಪಿಯವರಂತೆ 28 ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ಸುಳ್ಳು ಹೇಳುವುದಿಲ್ಲ ಎಂದರು. ಚುನಾವಣಾ ಸಮೀಕ್ಷೆಯನ್ನು ಮಾಡಿಸಿರುವುದಾಗಿ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

**ಸಚಿವ ಸಂಪುಟದಲ್ಲಿ ಚರ್ಚೆ:** ಸರ್ಕಾರಿ ನೌಕರರಿಗೆ ಹಳೆ ಪಿಂಚಣಿ ಜಾರಿ ಮಾಡುವ



ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚಿಸುವುದಾಗಿ ಹೇಳಿದರು.

**ವರಿಷ್ಠರು ತೀರ್ಮಾನಿಸುತ್ತಾರೆ:** ಇಂಡಿಯಾ ಒಕ್ಕೂಟದಿಂದ ಹಲವು ಪಕ್ಷಗಳು ಬಿಟ್ಟು ಹೋಗುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಮಲ್ಲಿಕಾರ್ಜುನ ಖರ್ಗೆ ರಾಹುಲ್ ಗಾಂಧಿ ಹಾಗೂ ಸೋನಿಯಾ ಗಾಂಧಿ ಯವರು ಈ ಬಗ್ಗೆ ನಿರ್ಧಾರ ಮಾಡುತ್ತಾರೆ ಎಂದರು. ನಾನು ಈ ಬಗ್ಗೆ ಮಾತನಾಡುವುದಿಲ್ಲ ಎಂದರು.

ಜಾತಿವಾರು ಜನಗಣತಿ ವರದಿಯನ್ನು ಸಲ್ಲಿಸಿದರೆ ವರದಿಯನ್ನು ಸ್ವೀಕಾರ ಮಾಡುವುದಾಗಿ ತಿಳಿಸಿದರು. ವರದಿಯಲ್ಲಿ ಏನಿದೆ ಎಂದು ಸಲ್ಲಿಕೆಯಾದ ಮೇಲೆ ಚರ್ಚೆ ಮಾಡುವುದಾಗಿ ತಿಳಿಸಿದರು.

## ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಧ್ವಜ ಹಾರಿಸಲಷ್ಟೇ ಅವಕಾಶ: ಸಚಿವ

» **ಮಂಡ್ಯ**



ಸಂವಿಧಾನದಡಿಯಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಧ್ವಜ ಹಾರಿಸಲಷ್ಟೇ ಅವಕಾಶವಿದೆ. ಇದರ ಹೊರತಾಗಿ ಯಾವುದೇ ರಾಜಕೀಯ, ಧಾರ್ಮಿಕ ಧ್ವಜ ಹಾರಿಸಲು ಅವಕಾಶವಿಲ್ಲ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಅವರು ತಿಳಿಸಿದರು. ಕೆರಗೂಡು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಹನುಮ ಧ್ವಜ ಹಾರಿಸಿರುವ ವಿಚಾರವಾಗಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಪ್ರತಿಕ್ರಿಯಿಸಿ ಮಾತನಾಡಿದರು.

ಪಂಚಾಯ್ತಿ ವ್ಯಾಪ್ತಿಯ ಸರ್ಕಾರಿ ಜಾಗದಲ್ಲಿ ರಾಷ್ಟ್ರೀಯ ಧ್ವಜ ಹಾರಿಸಬಹುದು. ಅದು ಹೊರತು ಪಡಿಸಿ ಸರ್ಕಾರಿ ಜಾಗದಲ್ಲಿ ಬೇರೆ ಧ್ವಜವನ್ನು ಹಾರಿಸುವಂತಿಲ್ಲ. ತ್ರಿವರ್ಣ ಧ್ವಜಕ್ಕೆ ಅನುಮತಿ ಪಡೆದು ಬೇರೆ ಧ್ವಜ ಹಾರಿಸೋದು ತಪ್ಪು.ನಾಳೆ ಬೆಳಿಗ್ಗೆ ಡಿಸಿ ಕಚೇರಿ ಮುಂದೆ ಹಾರಿಸ್ತೀನಿ ಅಂತಾರೆ. ಆಗ ಅವಕಾಶ ಕೊಡಲು ಆಗುತ್ತಾ.? ಇದು ಒಂದು ಕಡೆ ಅವಕಾಶ ಕೊಟ್ರೆ ಎಲ್ಲಾ ಕಡೆ ಕೇಳ್ತಾರೆ. ಇದು ತಪ್ಪು ಎಂದರು.ಸ್ಥಳೀಯ ಯುವಕರು ಒಳ್ಳೆಯವರೇ ಅವರನ್ನ ದಾರಿ ತಪ್ಪಿಸುತ್ತಿದ್ದಾರೆ. ಎಲ್ಲಾ ಯುವಕರ ಜೊತೆ ಮಾತನಾಡುತ್ತೇನೆ. ಬೇರೆ ಸ್ಥಳದಲ್ಲಿ ಹನುಮಾನ್ ಧ್ವಜ ಹಾರಿಸಲು ಖಾಸಗಿ ಜಾಗದಲ್ಲಿ ಅಥವಾ ದೇವಾಲಯದ ಮುಂದೆ ಹಾಕಲು ಅವಕಾಶ ಕೊಡೋಣ ಆದರೆ ಸರ್ಕಾರಿ ಕಛೇರಿ ಮುಂದೆ ಬೇಡ ಎಂದರು.

ನಾನು ರಾಮ ಭಕ್ತ, ನಮ್ಮ ಮನೆ ದೇವರು ವಿಷ್ಣು. ನಾವು ಯಾವುದೇ ಧ್ವಜದ ವಿರೋಧಿಗಳಲ್ಲ. ಪಂಚಾಯ್ತಿಯಲ್ಲಿ ಸಭೆಯಲ್ಲಿ ಹನುಮ ಧ್ವಜ ಹಾರಿಸಲು ಅನುಮೋದನೆ ನೀಡದ್ದರೆ ತಪ್ಪು. ಅವರ ವಿರುದ್ಧವೂ ಕ್ರಮ ಆಗುತ್ತದೆ. ಇದರಲ್ಲಿ ನಾನಾಗಲಿ, ಸ್ಥಳೀಯ ಶಾಸಕರಾಗಲಿ ರಾಜಕೀಯ ಮಾಡ್ತಿಲ್ಲ. ಸರ್ಕಾರಿ ಕಛೇರಿ ಮುಂದೆ ಹನುಮ ಧ್ವಜ ಹಾರಿಸಿರುವುದ ಸಂವಿಧಾನ ವಿರುದ್ಧ ಆಗಿರುವುದರಿಂದ ಅದನ್ನ ತೆರವು ಮಾಡಲಾಗಿದೆ ಎಂದರು.

## ವೇದಾ ವಿದ್ಯಾಸಂಸ್ಥೆಯ ವೇದೋತ್ಸವ ಕಾರ್ಯಕ್ರಮ

## ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಕನಸನ್ನು ನನಸು ಮಾಡುವಲ್ಲಿ ಯಶಸ್ವಿಯಾಗಿ: ರಘುಮೂರ್ತಿ

» **ಚಳ್ಳಕೆರೆ**

ತಾಲ್ಲೂಕಿನ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ಗ್ರಾಮೀಣ ಭಾಗದಲ್ಲಿ ವಸತಿಶಾಲೆ ಆರಂಭಿಸುವ ಮೂಲಕ ಕಳೆದ ಹತ್ತಾರು ವರ್ಷಗಳಿಂದ ಸಾವಿರಾರು ಗ್ರಾಮೀಣ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡಿ, ಅವರ ಶೈಕ್ಷಣಿಕ ಪ್ರಗತಿಗೆ ಕಾರಣವಾದ ವೇದಾ ವಿದ್ಯಾಸಂಸ್ಥೆ ತನ್ನ ವೇದೋತ್ಸವ ಕಾರ್ಯಕ್ರಮದ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ತನ್ನದೇಯಾದ ವಿಶೇಷಸ್ಥಾನವನ್ನು ಪಡೆದಿದೆ ಎಂದು ಶಾಸಕ ಟಿ.ರಘುಮೂರ್ತಿ ಪ್ರಶಂಸೆ ವ್ಯಕ್ತಪಡಿಸಿದರು.

ಅವರು, ತಾಲ್ಲೂಕಿನ ಸಾಣೀಕೆರೆ ಬಳಿ ಇರುವ ವೇದಾ ವಿದ್ಯಾಸಂಸ್ಥೆಯ ವೇದೋತ್ಸವ ಕಾರ್ಯಕ್ರಮವನ್ನು ಜ್ಯೋತಿಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಖಾಸಗಿ ವಿದ್ಯಾಸಂಸ್ಥೆಗಳು ವ್ಯಾಪಾರಿ ಕೇಂದ್ರಗಳಾಗುತ್ತಿವೆ ಎಂಬ ಆರೋಪವನ್ನು ದೂರ ಮಾಡುವಂತೆ ವೇದವಿದ್ಯಾಸಂಸ್ಥೆ ಕಾರ್ಯನಿರ್ವಹಿಸುತ್ತಿದೆ. ಶಿಸ್ತು ಮತ್ತು ಶಿಕ್ಷಣ ಎರಡೂ ಈ ವಿದ್ಯಾಸಂಸ್ಥೆಯಲ್ಲಿ ಸಮ್ಮಿಡಿತವಾಗಿವೆ ಎಂದರು. ಕಾರ್ಯಕ್ರಮದ ಆಕರ್ಷಣೆ ಎಂಬುವಂತೆ ಚಲನಚಿತ್ರನಟ ಹಾಗೂ ಮಾಜಿ ವಿಧಾನಪರಿಷತ್ ಸದಸ್ಯ ಪ್ರಣಯರಾಜಶ್ರೀನಾಥ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಾ, ಈ ಹಿಂದೆ ನಾವೆಲ್ಲಾ ವಿದ್ಯಾಬ್ಯಾಸ ಮಾಡುವಾಗ ಯಾವುದೇ ಸೌಲಭ್ಯಗಳು ನಮ್ಮಲ್ಲಿ ಇರಲಿಲ್ಲ. ಬೆಂಗಳೂರಿನಂತಹ ಬೃಹತ್ ನಗರದಲ್ಲೂ ಸಹ ಶಿಕ್ಷಣ ಪಡೆಯುವುದು ಕಷ್ಟವಾಗಿತ್ತು. ಆದರೆ, ವೇದಾವಿದ್ಯಾಸಂಸ್ಥೆ ನಗರ ಪರಿಸರವನ್ನು ಬಿಟ್ಟು ಗ್ರಾಮೀಣ ಪರಿಸರದಲ್ಲೇ ಸ್ಥಾಪನೆಯಾಗಿ ವಸತಿ



ಶಾಲೆಯ ಮೂಲಕ ಯಾವ ವಿದ್ಯಾರ್ಥಿಗೂ ಯಾವುದೇ ಕೊರತೆ ಉಂಟಾಗದಂತೆ ಶಿಕ್ಷಣ ನೀಡುತ್ತಿದೆ. ಇಂತಹ ವಿದ್ಯಾಸಂಸ್ಥೆಗಳಿಗೆ ಹೆಚ್ಚಿನ ಪ್ರೋತ್ಸಾಹ ಅಗತ್ಯವಿದೆ. ಈ ವಿದ್ಯಾಸಂಸ್ಥೆ ಜಿಲ್ಲಾ, ರಾಜ್ಯ ಮಟ್ಟ ವಿದ್ಯಾಸಂಸ್ಥೆಯಾಗಿ ಹೊರಹೊಮ್ಮಲಿ ಎಂದು ಹಾರೈಸುವುದಾಗಿ ತಿಳಿಸಿದರು. ಇದೇ ಸಂದರ್ಭದಲ್ಲಿ ವಿದ್ಯಾಸಂಸ್ಥೆ ವತಿಯಿಂದ ಚಿತ್ರನಟ ಶ್ರೀನಾಥರವರಿಗೆ ವೇದಾಕಾಯಕರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಡಿ.ಟಿ.ರವೀಂದ್ರಮಾತನಾಡಿ, ಗ್ರಾಮೀಣ ಭಾಗದಲ್ಲಿ ಹುಟ್ಟಿಬೆಳೆದ ನನಗೆ ಉನ್ನತ್ತ ಶಿಕ್ಷಣ ಕಲಿಯುವ ಹಂಬಲವಿತ್ತು. ಆದರೆ, ಯಾವುದೇ ಸೌಲಭ್ಯವಿರಲಿಲ್ಲ.ಇದುಕೇವಲನಮ್ಮೊಬ್ಬನಿಗೆಮಾತ್ರ ಸೀಮಿತವಾಗದೆ ಗ್ರಾಮೀಣ ಭಾಗದ ಸಾವಿರಾರು ಬಡ ಕುಟುಂಬದ ವಿದ್ಯಾರ್ಥಿಗಳು ಉನ್ನತ್ತ ಶಿಕ್ಷಣ ಮರೀಚಿಕೆಯಾಗಿತ್ತು. ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶಿಕ್ಷಣ ಕನಸುನನಸು ಮಾಡುವ ಸಂಕಲ್ಪ ಮಾಡಿ ಎಲ್ಲರ ಸಹಕಾರದಿಂದ ಗ್ರಾಮೀಣ ಭಾಗದಲ್ಲಿಯೇ ನಮ್ಮ ವೇದಾವಿದ್ಯಾಸಂಸ್ಥೆಯನ್ನು ಆರಂಭಿಸಿದ್ದೇವೆ. ಎಲ್ಲರ ಸಹಕಾರದಿಂದ ಈ ವಿದ್ಯಾರ್ಥಿ ಸಂಸ್ಥೆ ಹಂತ, ಹಂತವಾಗಿ ಅಭಿವೃದ್ಧಿಪಥದತ್ತ ಸಾಗುತ್ತಿದೆ. ಶಿಕ್ಷಣ ಸಂಸ್ಥೆಯ ಪದಾಧಿಕಾರಿಗಳು, ಬೋಧಕ, ಬೋಧಕೇತರ ವರ್ಗ, ಪೋಷಕರು ಹಾಗೂ ಸಹಕಾರ ನೀಡಿದ ಎಲ್ಲರನ್ನೂ ಅಭಿನಂದಿಸುವುದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾಉಪನಿರ್ದೇಶಕರು ಪದವಿಪೂರ್ವ ಶಿಕ್ಷಣ ಇಲಾಖೆಯ ಪುಟ್ಟಸ್ವಾಮಿ, ಹಿರಿಯ ಸಹಕಾರಿ ದುರೀಣ ಆರ್.ಮಲ್ಲೇಶಪ್ಪ, ಪ್ರಗತಿಪರ ರೈತ ದಿನೇಶ್‌ರೆಡ್ಡಿ, ಆರ್.ಎ.ದಯಾನಂದಮೂರ್ತಿ, ಮಲ್ಲಿಕಾರ್ಜುನಪ್ಪ,ಪ್ರಸನ್ನಕುಮಾರ್,ರವಿನಾಯಕ, ಎಸ್.ಬಿ.ರಾಜು, ಕೃಷ್ಣಾರೆಡ್ಡಿ, ಪ್ರಾಂಶುಪಾಲರಾದ ಪುಷ್ಪರಾಣಿ, ಸುಗುಣ, ಕಾರ್ಯದರ್ಶಿಡಿ.ಆರ್. ಕಿರಣ್, ಪ್ರಧಾನವ್ಯವಸ್ಥಾಪಕ ಆರ್.ವಿಜಯ್, ದಿವ್ಯ ಆಲೂರು ಮುಂತಾದವರು ಉಪಸ್ಥಿತರಿದ್ದರು. ಶಾಲಾ ವಿದ್ಯಾರ್ಥಿಗಳಿಂದ ಮನೋರಂಜನೆ ಕಾರ್ಯಕ್ರಮ ನಡೆದವು.

## ರಾಜ್ಯ ಕಾಂಗ್ರೆಸ್ ಸರಕಾರಕ್ಕೆ ಎಲ್ಲೋ ಒಂದು ಕಡೆ ಅಧಿಕಾರದ ದರ್ಪ ನೆತ್ತಿಗೇರಿದೆ :ವಿಜಯೇಂದ್ರ

» **ಬೆಂಗಳೂರು**



ರಾಜ್ಯ ಕಾಂಗ್ರೆಸ್ ಸರಕಾರಕ್ಕೆ ಎಲ್ಲೋ ಒಂದು ಕಡೆ ಅಧಿಕಾರದ ದರ್ಪ ನೆತ್ತಿಗೇರಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.ರವಿವಾರ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಮಂಡ್ಯದಲ್ಲಿ ಕೆರೆಗೋಡು ಗ್ರಾಮದ ಗ್ರಾಮ ಪಂಚಾಯತ್ ವತಿಯಿಂದ ನಿರ್ಣಯಿಸಿ 100 ಅಡಿ ಎತ್ತರದ ಧ್ವಜಸ್ತಂಭ ಸ್ಥಾಪನೆ ಮಾಡಿ, ಧ್ವಜ ಹಾರಿಸಿದ ಸಂದರ್ಭದಲ್ಲಿ ಅದನ್ನು ರಾಜ್ಯ ಸರಕಾರವು ಪೊಲೀಸರ ಮೂಲಕ ದಬ್ಬಾಳಿಕೆ ಮಾಡಿ, ಧ್ವಜ ಇಳಿಸುವ ದುಸ್ಸಾಹಸಕ್ಕೆ ಕೈಹಾಕಿದೆ ಎಂದು ಟೀಕಿಸಿದರು.ರಾಜ್ಯದಲ್ಲಿ ಕಾನೂನು- ಸುವ್ಯವಸ್ಥೆ ಹದಗೆಡಿಸುವ ಪರಿಸ್ಥಿತಿಯನ್ನು ನಿಮ್ಮ ಸರಕಾರವೇ ನಿರ್ಮಾಣ ಮಾಡುತ್ತಿದೆ ಎಂದು ನಾನು ನೇರವಾಗಿ ಮುಖ್ಯಮಂತ್ರಿಗಳಿಗೆ ಮತ್ತು ಗೃಹ ಸಚಿವರಿಗೆ ಈ ಸಂದರ್ಭದಲ್ಲಿ ಹೇಳುತ್ತೇನೆ ಎಂದು ನುಡಿದರು. ಮಂಡ್ಯ ಜಿಲ್ಲೆಯಲ್ಲಿ ಗ್ರಾಮ ಪಂಚಾಯತ್ ನಿರ್ಣಯ ಮಾಡಿದ್ದು, ನಿಮಗೆ ಸಹಿಸಲು ಸಾಧ್ಯವಾಗದಿದ್ದರೆ ಏನು ಮಾಡಲು ಹೊರಟಿದ್ದೀರಿ ಎಂದು ಪ್ರಶ್ನಿಸಿದರು.

## ಕೊಡಗು ಜಿಲ್ಲೆ ಪ್ರತ್ಯೇಕ ಲೋಕಸಭಾ ಸ್ಥಾನ ಹೊಂದಬೇಕು

» **ಮಡಿಕೇರಿ**

'ಕೊಡಗು ಜಿಲ್ಲೆ ಪ್ರತ್ಯೇಕ ಲೋಕಸಭಾ ಸ್ಥಾನ ಹೊಂದಬೇಕು. ಇದಕ್ಕಾಗಿ ನಾನು ಪ್ರಬಲವಾದ ಧ್ವನಿ ಎತ್ತುತ್ತೇನೆ' ಎಂದು ಸಂಸದ ಪ್ರತಾಪಸಿಂಹ ತಿಳಿಸಿದರು. ವಿಶೇಷ ಸಂಸ್ಕೃತಿ, ಭಾಷೆ, ಆಚಾರ ವಿಚಾರಗಳನ್ನು ಹೊಂದಿರುವ ಪ್ರದೇಶ ಕೊಡಗು. ಇದು ಯಾವಾಗಲೂ ಜನಸಂಖ್ಯೆ ಕಡಿಮೆ ಇದೆ ಎಂಬ ಕಾರಣಕ್ಕೆ ಮಂಗಳೂರು ಇಲ್ಲವೇ ಮೈಸೂರು ಲೋಕಸಭಾ ಕ್ಷೇತ್ರಕ್ಕೆ ಸೇರುತ್ತಿದೆ. ಡಾರ್ಜಿಲಿಂಗ್ ಹಾಗೂ ಲಕ್ಷದ್ವೀಪದ ಮಾದರಿಯಲ್ಲಿ ಜನಸಂಖ್ಯೆ ಕಡಿಮೆ ಇದ್ದರೂ ಪ್ರತ್ಯೇಕ ಲೋಕಸಭಾ ಸ್ಥಾನ ಕೊಡಗಿಗೆ ನೀಡಬೇಕು ಎಂದರು.

## ಫಾಸ್ಟ್ ನ್ಯೂಸ್

### ಬುಡ್ನಹಟ್ಟಿ ಅಂಡರ್‌ಪಾಸ್‌ನಲ್ಲಿ ಲಾರ್ಕಿ ಪಲ್ಟಿ: ನಾಲ್ವರಿಗೆ ಗಾಯ

» **ಚಳ್ಳಕೆರೆ**

ಚಳ್ಳಕೆರೆ ಠಾಣಾ ವ್ಯಾಪ್ತಿಯ ಬೆಂಗಳೂರು ರಸ್ತೆಯ ರಾಷ್ಟ್ರೀಯ ಹೆದ್ದಾರಿ ಬುಡ್ನಹಟ್ಟಿ ಗ್ರಾಮದ ಬಳಿ ಈಚರ್‌ಲಾರಿಯೊಂದು ಅಡ್ಡಾದಿಟ್ಟಿ ಚಲಿಸಿ ಸೇತುವೆಗೆ ಡಿಕ್ಕಿಯಾಗಿ ಪಲ್ಟಿಯಾದ ಪರಿಣಾಮ ಲಾರಿಯಲ್ಲಿ ಪ್ರಯಾಣಿಸುತ್ತಿದ್ದ ಬಳ್ಳಾರಿ ತಾಲ್ಲೂಕಿನ ಕೊರ್ಲಗುಂದಿ ಗ್ರಾಮದ ಗಾದ್ರಿಲಿಂಗಪ್ಪ, ರಾಮಾಂಜಿನಿ, ಈ.ಪಾರ್ಥ, ರಾಮು ಎಂಬುವವರು ಗಾಯಗೊಂಡಿರುತ್ತಾರೆ. ಲಾರಿ ಚಾಲಕ ನಾಪತ್ತೆಯಾಗಿದ್ದು, ಆತನ ಮೇಲೆ ಕ್ರಮಕೈಗೊಳ್ಳುವಂತೆ ದೂರು ನೀಡಿದ್ದು, ಚಳ್ಳಕೆರೆಪೊಲೀಸರು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ಧಾರೆ.

### ಬಿಜೆಪಿ ಜೊತೆ ಹೊಂದಾಣಿಕೆಗೆ ಸಿದ್ಧ: ಜನಾರ್ದನ ರೆಡ್ಡಿ

» **ಕೊಪ್ಪಳ**

ಮೋದಿ ಪ್ರಧಾನಿಯಾಗಲು ಬಿಜೆಪಿ ಜೊತೆ ಹೊಂದಾಣಿಕೆಗೆ ಕೆಆರ್‌ಪಿಪಿ ಸಿದ್ಧ ಎಂದು ಕೆಆರ್‌ಪಿಪಿ ಸಂಸ್ಥಾಪಕ ಜನಾರ್ದನ ರೆಡ್ಡಿ ಹೇಳಿದ್ದಾರೆ.ಈ ಸಂಬಂಧ ಮಾತನಾಡಿದ ಅವರು,ಮೋದಿ ಮತ್ತೆ ಪ್ರಧಾನಿಯಾಗಬೇಕು. ಮೋದಿ ಪ್ರಧಾನಿಯಾಗಲು ಹೊಂದಾಣಿಕೆಗೆ ಕೆಆರ್‌ಪಿಪಿ ಸಿದ್ಧ.ನಮ್ಮ ಪಕ್ಷದಿಂದ ಗೆದ್ದ ಮೇಲೆ ಬಿಜೆಪಿಗೆ ಸಪೋರ್ಟ್ ಮಾಡುತ್ತೇನೆ. ಬಿಜೆಪಿ ನಾಯಕರು ನನ್ನ ಜೊತೆ ಚರ್ಚೆ ಮಾಡುತ್ತಿದ್ದಾರೆ. ಕೆಆರ್‌ಪಿಪಿಯಿಂದ 4-5 ಕಡೆ ಅಭ್ಯರ್ಥಿ ಹಾಕಬೇಕು ಅಂದುಕೊಂಡಿದ್ದೇನೆ ಎಂದು ಹೇಳಿದ್ದಾರೆ.ಜಗದೀಶ್ ಶೆಟ್ಟರ್ ಬಿಜೆಪಿಗೆ ಮರು ಸೇರ್ಪಡೆಯಾದ ಬಳಿಕ ಈಗ ಮಾಜಿ ಸಚಿವ ಜನಾರ್ದನ ರೆಡ್ಡಿ ಅವರನ್ನು ಬಿಜೆಪಿ ಸಂಪರ್ಕ ಮಾಡುವ ಪ್ರಯತ್ನ ನಡೆದಿದೆ. ಕೊಪ್ಪಳದಿಂದ ರೆಡ್ಡಿ ಕಣಕ್ಕಿಳಿಸುವ ಬಗ್ಗೆಯೂ ಚಿಂತನೆ ನಡೆದಿದೆ ಎನ್ನಲಾಗಿದೆ.ಆಗಿರುವ ಮಾಜಿ ಸಚಿವ ಜನಾರ್ದನ ರೆಡ್ಡಿ ಅವರನ್ನು ಲೋಕಸಭಾ ಚುನಾವಣಾ ದೃಷ್ಟಿ ಇಟ್ಟುಕೊಂಡು ಬಿಜೆಪಿ ಸೆಳೆಯುವ ಪ್ರಯತ್ನ ಮಾಡಿದೆ. ಕಲ್ಯಾಣ ಕರ್ನಾಟಕ ಭಾಗದ ಮೂರ್ನಾಲ್ಕು ಲೋಕಸಭಾ ಕ್ಷೇತ್ರಕ್ಕೆ ಲಾಭವಾಗುವ ಲೆಕ್ಕಾಚಾರವನ್ನು ಬಿಜೆಪಿ ಹಾಕಿದೆ. ಆದರೆ ಜನಾರ್ದನ ರೆಡ್ಡಿ ಬಿಜೆಪಿಯ ನೇರಾ ನೇರ ಬೇಡಿಕೆಗೆ ಇನ್ನೂ ಪೂರ್ಣ ಒಪ್ಪಿಗೆ ಸೂಚಿಸಿಲ್ಲ. ಕೆಆರ್ ಪಿಪಿ ಪಕ್ಷವನ್ನು ಬಿಜೆಪಿಯಲ್ಲಿ ವಿಲೀನ ಮಾಡುವ ಬೇಡಿಕೆಯನ್ನು ಬಿಜೆಪಿ ನಾಯಕರು ಜನಾರ್ದನ ರೆಡ್ಡಿ ಮುಂದೆ ನೇರವಾಗಿ ಇಟ್ಟಿದ್ದಾರೆ. ವಿಲೀನ ಮಾಡುವ ಬದಲು ಸದ್ಯಕ್ಕೆ ಸಕಾರಾತ್ಮಕವಾಗಿ ಜನಾರ್ದನ ರೆಡ್ಡಿ ಪ್ರತಿಕ್ರಿಯಿಸಿದ್ದಾರೆ.

### ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ 30 ವರ್ಷ ಜೈಲು ಶಿಕ್ಷೆ



» **ಮೈಸೂರು**

ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರವೆಸಗಿದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಅಪರಾಧಿಗೆ 30 ವರ್ಷಗಳ ಕಠಿಣ ಜೈಲು ಶಿಕ್ಷೆ ವಿಧಿಸಿ ಮೈಸೂರು ನ್ಯಾಯಾಲಯ ತೀರ್ಪು ನೀಡಿದೆ ಎಂದು ವರದಿಯಾಗಿದೆ.

ಪರಮಾನಂದ(31) ಜೈಲು ಶಿಕ್ಷೆಗೆ ಗುರಿಯಾದ ಆರೋಪಿ ಎಂದು ತಿಳಿದು ಬಂದಿದೆ. ಧಾರವಾಡ ಜಿಲ್ಲೆ ನವಲಗುಂದ ಮೂಲದ ಆರೋಪಿ ಸಂತ್ರಸ್ಥ ಬಾಲಕಿಯ ಮಲತಂದೆಯಾಗಿದ್ದು, ಒಟ್ಟಿಗೆ ಮನೆಯಲ್ಲಿ ವಾಸವಿದ್ದಾಗ ಆರೋಪಿ ಪರಮಾನಂದ ಅಪ್ರಾಪ್ತ ಬಾಲಕಿಯೊಂದಿಗೆ ಬಲವಂತವಾಗಿ ದೈಹಿಕ ಸಂಪರ್ಕ ಹೊಂದಿದ್ದ ಎನ್ನಲಾಗಿದೆ. ಈ ವಿಚಾರವನ್ನು ಯಾರಿಗೂ ತಿಳಿಸದಂತೆ ಬಾಲಕಿಗೆ ಬೆದರಿಕೆ ಹಾಕಿ ಹಾಗೂ ಆಕೆಯನ್ನು ಮದುವೆ ಮಾಡಿಕೊಳ್ಳಲು ಹಿಂಸೆ ನೀಡುತ್ತಿದ್ದ ಎಂಬ ಆರೋಪ ಕೇಳಿ ಬಂದಿತ್ತು. ಈ ಬಗ್ಗೆ ಅಪ್ರಾಪ್ತ ಬಾಲಕಿಯ ತಾಯಿ ಕೆ.ಆರ್. ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಪ್ರಕರಣದ ತನಿಖೆಯನ್ನು ನಡೆಸಿದ ಕೆ.ಆರ್.ಪೊಲೀಸ್ ಠಾಣೆ ಪಿಐ ಮಹೇಶ್ ಆರೋಪಿಯ ವಿರುದ್ಧ ಪೊಕ್ಸೊ ಕಾಯಿದೆ ಮತ್ತು ಭಾರತೀಯ ದಂಡ ಸಂಹಿತೆ ಅಡಿಯಲ್ಲಿ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆಯನ್ನು ನಡೆಸಿದ ಪೊಕ್ಸೊ ವಿಶೇಷ ನ್ಯಾಯಾಲಯದ ನ್ಯಾಯಾಧೀಶರಾದ ಶೈಮಾ ಖಮೋಜ್ ಅವರು ಆರೋಪಿಯ ವಿರುದ್ಧ ಆರೋಪ ಸಾಬೀತಾಗಿದೆ ಎಂದು ತಿಳಿಸಿ ಆರೋಪಿಗೆ ಪೋಕ್ಸೋ ಕಾಯಿದೆ ಅಡಿಯಲ್ಲಿನ ಅಪರಾಧಗಳಿಗಾಗಿ ಒಟ್ಟು 30 ವರ್ಷಗಳ ಕಠಿಣ ಶಿಕ್ಷೆಯನ್ನು ಮತ್ತು ಒಂದು ಲಕ್ಷ ರೂ.ಗಳ ದಂಡವನ್ನು ವಿಧಿಸಿ ಆದೇಶ ನೀಡಿದ್ದಾರೆ ಎಂದು ತಿಳಿದು ಬಂದಿದೆ.ಈ ಪ್ರಕರಣದಲ್ಲಿ ಸರ್ಕಾರದ ಪರವಾಗಿ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ಕೆ.ಬಿ. ಜಯಂತಿ ರವರು ನ್ಯಾಯಾಲಯದಲ್ಲಿ ವಾದ ಮಂಡಿಸಿದ್ದರು.

## ಪ್ರಮುಖ ಸುದ್ದಿ

# ಸಮುದಾಯ ಆಧಾರಿತ ಆರೋಗ್ಯ ತಪಾಸಣೆ ಮೂಲಕ ಜನರಲ್ಲಿ ಆರೋಗ್ಯ ಜಾಗೃತಿ: ಡಾ.ವೆಂಕಟೇಶ್

» **ಚಳ್ಳಕೆರೆ**

ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ದಿಢೀರನೆ ವ್ಯಾಪಿಸಿದ ಎಚ್-1ಎನ್-1 ವೈರಾಣು ಜನರಲ್ಲಿ ಆತಂಕ ಮೂಡಿಸಿತ್ತು. ಆದರೆ, ಆರೋಗ್ಯ ಇಲಾಖೆ ಸಾರ್ವಜನಿಕರನ್ನು ಜಾಗೃತಗೊಳಿಸಿ ಈ ವೈರಾಣುವಿನ ಅವಾಂತರವನ್ನು ನಿಯಂತ್ರಿಸಲು ಸಾಕಷ್ಟು ಪರಿಶ್ರಮ ವಹಿಸಿತ್ತು. ಇದರ ಪರಿಣಾಮವಾಗಿ ಎಲ್ಲರೂ ಆರೋಗ್ಯವಂತರಾಗಿದ್ದಾರೆ. ಆರೋಗ್ಯ ವಿಚಾರದಲ್ಲಿ ಯಾವುದೇ ಹಂತದಲ್ಲೂ ನಿರ್ಲಕ್ಷ್ಯ ಸಲ್ಲದು ಎಂದು ನಗರದ ಸಾರ್ವಜನಿಕ ಆಸ್ಪತ್ರೆಯ ಆಯುರ್ವೇದಿಕ್ ತಜ್ಞ ಡಾ.ಆರ್. ವೆಂಕಟೇಶ್ ತಿಳಿಸಿದರು.

ಅವರು, ಭಾನುವಾರ ಸಂತೆ ಮೈದಾನದಲ್ಲಿ ಆರೋಗ್ಯ ಇಲಾಖೆ ಹಮ್ಮಿಕೊಂಡಿದ್ದ ಸಮುದಾಯ ಆಧಾರಿತ ಆರೋಗ್ಯ ತಪಾಸಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಆರೋಗ್ಯ




ಇಲಾಖೆ ನಿರಂತರವಾಗಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಮುದಾಯ ಆಧಾರಿತ ಆರೋಗ್ಯ ತಪಾಸಣೆ ಮಾಡುವ ಮೂಲಕ ಯಾರೂ ಸಹ ಅನಾರೋಗ್ಯಕ್ಕೆ ತುತ್ತಾಗದಂತೆ ಹೆಚ್ಚು ಜಾಗೃತೆ ವಹಿಸುತ್ತಾ ಬಂದಿದೆ. ವೈದ್ಯರು, ಸಿಬ್ಬಂದಿಯವರ ಮುಂಜಾಗ್ರತೆಯಿಂದ ಯಾವುದೇ ಪ್ರಾಣಾಪಾಯ ಉಂಟು ಮಾಡುವ ರೋಗಗಳು ಸುಳಿಯದಂತೆ ಜಾಗೃತೆ ವಹಿಸಲಾಗಿದೆ ಎಂದರು.

ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ ಮಾತನಾಡಿ, ಇಂದು ನಡೆದ ಈ ಆರೋಗ್ಯ ತಪಾಸಣಾ ಶಿಬಿರದಲ್ಲಿ ಬಿಪಿ.ಶುಗರ್, ರಕ್ತಪರೀಕ್ಷೆ, ಸ್ಕೀನಿಂಗ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಸಂಖ್ಯೆಯ ಜನರು ಆಗಮಿಸಿ ಆರೋಗ್ಯ ತಪಾಸಣೆಗೆ ಒಳಗಾಗಿದ್ದಾರೆ. ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿಗಳ ಸೂಚನೆಯಂತೆ ಎಲ್ಲೆಡೆ ಈ ಕಾರ್ಯಕ್ರಮವನ್ನು ಹಮ್ಮಿಕ ’ೂಳ್ಳಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಐಸಿಟಿಸಿ ಆಪ್ತ ಸಮಾಲೋಚಕರಾದ ನಂದಜ್ಯೋತಿ, ಲ್ಯಾಬ್ ಟೆಕ್ನಿಷನ್ ಕಿರಣ್‌ಕುಮಾರ್, ಆರೋಗ್ಯ ನಿರೀಕ್ಷಕಿ ಗೀತಾಕುಮಾರಿ, ಸಂತೆ ವ್ಯಾಪಾರಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ವಿಜಯಕುಮಾರ್,ಓಬಣ್ಣಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಶಿವರಾತ್ರಿ ಮಹೋತ್ಸವ ಮಧ್ಯ ಕರ್ನಾಟಕದ ನಾಡ ಹಬ್ಬವಾಗಬೇಕು: ಮಾದಾರ ಚನ್ನಯ್ಯ ಶ್ರೀ

» ಚಿತ್ರದುರ್ಗ

ಶಿವರಾತ್ರಿ ಮಹೋತ್ಸವ ಮಧ್ಯ ಕರ್ನಾಟಕದ ನಾಡ ಹಬ್ಬವಾಗಿ ಪರಿಣಮಿಸಬೇಕಿದೆ ಎಂದು ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಶ್ರೀಗಳು ತಿಳಿಸಿದರು.

ನಗರದ ಕರುವಿನ ಕಟ್ಟೆವೃತ್ತದಲ್ಲಿನ ಶ್ರೀ ಸದ್ಗುರು ಕಬೀರಾನಂದಾಶ್ರಮದವತಿಯಿಂದ ನಡೆಯುವ 94ನೇ ಶಿವನಾಮ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ಶ್ರೀ ಸದ್ಗುರು ಕಬೀರಾನಂದಾಶ್ರಮದ ಆವರಣದಲ್ಲಿ ಕರೆಯಲಾಗಿದೆ ಪೂರ್ವಭಾವಿ ಸಭೆಯ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ನಾಡಿನ ಬೇರೆ ಬೇರೆ ಮಠಗಳು ಬೇರೆ ಬೇರೆ ಕಾರ್ಯಕ್ರಮಗಳನ್ನು ಮಾಡುತ್ತಾರೆ ಆದರೆ ಮಧ್ಯ ಕರ್ನಾಟಕದ ಕಬೀರಾನಂದಾಶ್ರಮದವತಿಯಿಂದ ನಡೆಯುವ ಮಹಾಶಿವರಾತ್ರಿ ಮಹೋತ್ಸವವೂ ಅತ್ಯಂತ ಸಡಗರದಿಂದ ನಡೆಯುತ್ತದೆ. ಈ ರೀತಿಯಾದ ಹಬ್ಬವೂ ನಾಡಹಬ್ಬವಾಗಿ ನಡೆದರೆ ಇನ್ನೂ ಚನ್ನಾಗಿ ಮೂಡಿ ಬರುತ್ತದೆ ಎಂದರು.

ಆರಂಭದಲ್ಲಿ ಚಿಕ್ಕದಾಗಿ ಪ್ರಾರಂಭವಾದರೂ ಸಹಾ ತದ ನಂತರ ದೊಡ್ಡದಾಗಿ ಬೆಳಿದಿದೆ. ಈಗ ಕರ್ನಾಟಕ ವ್ಯಾಪ್ತಿಗೆ ಬಂದಿದೆ. ಕಾರ್ಯಕ್ರಮದ ಮೂಲಕ ಶ್ರೀಗಳು ವೈಚಾರಿಕ ತತ್ವಗಳು ಪ್ರಗತಿಪರ ಕಾರ್ಯಕ್ರಮ ಹಾಗೂ ಶಿವನಾಮಕ್ಕೆ ಸಂಬಂಧಪಟ್ಟಂತೆ ಶಿವನಾಮ ಸ್ತೋತ್ರಗಳು ಭಾರತದ ಸನಾತನ ಧರ್ಮ ಹಾಗೂ ಪ್ರಗತಿಪರವಾದ ಚಿಂತನೆಗಳಿಗೆ ವೇದಿಕೆಯನ್ನು ಶ್ರೀಗಳು ನೀಡಿದ್ದಾರೆ. ಈ ಮಹೋತ್ಸವದಅಧ್ಯಕ್ಷರಾಗಿ ವಿವಿಧರೀತಿಯ ಗಣ್ಯರು ಕೆಲಸವನ್ನು ಮಾಡಿದ್ದಾರೆ. ನಾವು ನೀವು ಎಲ್ಲರು ಸಹಾ ಕೈಲಾದ ಮಟ್ಟಿಗೆ ಸಹಾಯವನ್ನು ಮಾಡಬೇಕಿದೆ. ಶ್ರೀಗಳು ಬೇರೆಯವರಿಂದ ಸಹಾಯವನ್ನು ಕೇಳಲು ಸಹಾ ಹಿಂಜರಿಯುತ್ತಾರೆ. ಈ ಹಿನ್ನಲೆಯಲ್ಲಿ ಶ್ರೀಗಳು ಶಿವರಾತ್ರಿ ಮಹೋತ್ಸವಕ್ಕೆ ದೇಣಿಗೆಯನ್ನು ಸಹಾ ಇಂತಿಷ್ಟು ಕೊಡಿ ಎಂದು ಕೇಳುವುದಿಲ್ಲ ನೀಡಿದಷ್ಟು ಮಾತ್ರ ಪಡೆಯುತ್ತಾರೆ ಈ ಹಿನ್ನಲೆಯಲ್ಲಿ ನಮ್ಮ ಕೈಲಾದ ಧನಸಹಾಯವನ್ನು ಮಾಡುವುದರ ಮೂಲಕ ಶ್ರೀಗಳಿಗೆ ನೆರವಾಗಬೇಕಿದೆ ಎಂದು ಶ್ರೀಗಳು ಕರೆ ನೀಡಿದರು.

ವರ್ಷದಿಂದ ವರ್ಷಕ್ಕೆ ಮಹೋತ್ಸವ ಚನ್ನಾಗಿ ನಡೆಯಬೇಕಿದೆ ಇದರ ಕಡೆ ಗಮನವನ್ನು ಹೆಚ್ಚಾಗಿ ನಡೆಯಬೇಕಿದೆ, ಕಳೆದ ಬಾರಿ ಆದ ತಪ್ಪುಗಳನ್ನು ಸರಿಪಡಿಸಿಕೊಳ್ಳುವುದರ ಮೂಲಕ ಈ ಬಾರಿ ಮಹೋತ್ಸವವನ್ನು ಚನ್ನಾಗಿ ಮಾಡಬೇಕಿದೆ. ಮಹೋತ್ಸವದಲ್ಲಿ ಸರಳ ಮತ್ತು ಸಹಜತೆ ಇರಬೇಕಿದೆ. ಎಲ್ಲರ ಸಹಕಾರ ಅಗತ್ಯವಾಗಿದೆ. ಶಿವರಾತ್ರಿ ಮಹೋತ್ಸವನ್ನು ಮಧ್ಯ ಕರ್ನಾಟಕದ ಉತ್ಸವವಾಗಬೇಕಿದೆ. ಎಂದು ಶ್ರೀಗಳು ತಿಳಿಸಿದರು.

ಕಾರ್ಯಕ್ರಮದ ಸಾನಿಧ್ಯವಹಿಸಿದ್ದ ಮತ್ತೋರ್ವ ಶ್ರೀಗಳಾದ ಶ್ರೀ ಸದ್ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳು ಮಾತನಾಡಿ, 94ನೇ ಶಿವರಾತ್ರಿ ಮಹೋತ್ಸವವೂ ಯಶಸ್ಸಿಯಾಗಿ ನಡೆಯಲು ಹಲವಾರು ಜನತೆ ಹಲವಾರು ವಿವಿಧ ರೀತಿಯ ಸಲಹೆಯನ್ನು ನೀಡಿದ್ದಾರೆ ಅವುಗಳನ್ನು ಸ್ವೀಕಾರ ಮಾಡುವುದರ ಮೂಲಕ ಮುಂದಿನ ದಿನದಲ್ಲಿ ರೂಪುರೇಷೆಗಳನ್ನು ತಯಾರಿಸಲಾಗುವುದು. ಈ ಕಾರ್ಯಕ್ರಮದ ಮೂಲಕ ಚಿತ್ರದುರ್ಗ ನಗರದ ಒಂದು ಸಂಧೇಶವನ್ನು ನೀಡುವುದು ನಮ್ಮ ಉದ್ದೇಶವಾಗಿದೆ. ನಿಮ್ಮೆಲ್ಲರ ಸಹಾಯ ಮತ್ತು ಸಹಕಾರ ಶ್ರೀಮಠಕ್ಕೆ ಇರಲಿ, ನಿಮ್ಮ ನೆರವಿನೊಂದಿಗೆ ಮಹಾ ಶಿವರಾತ್ರಿ ಮಹೋತ್ಸವ ನಡೆಯಬೇಕಿದೆ ಎಂದರು.



## ಶಿವನಾಮ ಸಪ್ತಾಹ ಕಾರ್ಯಕ್ರಮದ ಅಧ್ಯಕ್ಷರಾಗಿ ನಾಗರಾಜ್ ಆಯ್ಕೆ

» ಚಿತ್ರದುರ್ಗ

ನಗರದ ಕರುವಿನಕಟ್ಟೆವೃತ್ತದಲ್ಲಿನ ಶ್ರೀ ಸದ್ಗುರು ಕಬೀರಾನಂದಾಶ್ರಮದವತಿಯಿಂದ ನಡೆಯುವ ಶಿವನಾಮ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ಅಧ್ಯಕ್ಷರನ್ನು ಆಯ್ಕೆ ಮಾಡುವುದು ಪದ್ಧತಿಯಾಗಿದೆ ಶಿವನಾಮ ಸಪ್ತಾಹವೂ ಮಾರ್ಚ್ 2 ರಿಂದ 8ರವರೆಗೆ ನಡೆಯಲಿದ್ದು, ಈ ಹಿನ್ನಲೆಯಲ್ಲಿ ಶನಿವಾರ ನಡೆದ ಪೂರ್ವಬಾವಿ ಸಭೆಯಲ್ಲಿ 94ನೇ ಶಿವರಾತ್ರಿ ಮಹೋತ್ಸವದ ಅಧ್ಯಕ್ಷರಾಗಿ ಶಾಸಕರ ಸಹೋದರರು ಚಳ್ಳಕೆರೆ ನಗರಸಭೆ ಮತ್ತು ಕೆಡಿಪಿ ಸದಸ್ಯರಾದ ಕೆ.ಸಿ.ನಾಗರಾಜ್‌ರವರನ್ನು ಶ್ರೀ ಮಾದಾರ ಚನ್ನಯ್ಯ ಶ್ರೀಗಳು ಸಾನಿಧ್ಯದಲ್ಲಿ ಶ್ರೀ ಶಿವಲಿಂಗಾನಂದ ಶ್ರೀಗಳು ನೇಮಕ ಮಾಡಿದರು. ಈ ಸಂದರ್ಭದಲ್ಲಿ ನಾಗರಾಜ್ ರವರನ್ನು ಉಭಯ ಶ್ರೀಗಳು ಸನ್ಮಾಸಿದರು, ಈ ಸಮಯದಲ್ಲಿ ಬಿಜೆಪಿ ಮುಖಂಡರಾದ ಅನಿತ್ ಕುಮಾರ್, ನಂದಿ ನಾಗರಾಜ್, ನಗರಾಭೀವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬದರಿನಾಥ್, ಮಾಜಿ ಸದಸ್ಯರಾದ ಓಂಕಾರ್, ನಗರಸಭಾ ಸದಸ್ಯರಾದ ವೆಂಕಟೇಶ್, ಜೆಡಿಎಸ್ ನ ಗೋಪಾಲಸ್ವಾಮಿ ನಾಯ್ಕ್, ಶ್ರೀ ಗುರು ಕಭೀರಾನಂದಾಶ್ರಮದ ಕಾರ್ಯದರ್ಶಿಗಳಾದ ವಿ.ಎಲ್.ಪ್ರಶಾಂತ್, ಶ್ರೀಮಠದ ನಿರಂಜನ ಮೂರ್ತಿ, ರಾಮಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಬಾಪೂಜಿ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಕೆ.ಎಂ.ವಿರೇಶ್ ಮಾತನಾಡಿ, ಶ್ರೀಗಳು ತಾಯಿಯ ಹೃದಯದಂತೆ, ಎಲ್ಲರ ಕಷ್ಟಗಳಿಗೆ ಸ್ಪಂದಿಸುವ ಗುಣವನ್ನು ಹೊಂದಿದ್ದಾರೆ. 94ನೇ ಶಿವರಾತ್ರಿ ಮಹೋತ್ಸವವನ್ನು ಯಶಸ್ವಿಯಾಗಿ ಮಾಡುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ. ಈ ಮಹೋತ್ಸವವಕ್ಕೆ 25000ದೇಣಿಗೆಯನ್ನು ನೀಡುವ ಭರವಸೆಯನ್ನು ನೀಡಿದರು.

ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಬದರಿನಾಥ್ ಮಾತನಾಡಿ, ಭಕ್ತರಸಹಕಾರಶ್ರೀಗಳಮಾರ್ಗದರ್ಶನದಲ್ಲಿ 94ನೇ ಶಿವರಾತ್ರಿ ಮಹೋತ್ಸವ ಚನ್ನಾಗಿ ಮೂಡಿಬರಬೇಕಿದೆ, ಈ ಕಾರ್ಯದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕಿದೆ. ದೇಣೀಗೆ ಸಂಗ್ರಹದಲ್ಲಿಯೂ ಸಹಾ ಪ್ರಗತಿಯನ್ನು ಕಾಣಬೇಕಿದೆ ಎಂದರು.

ಬಿಜೆಪಿ ಮುಖಂಡರಾದ ಅನಿತ್ ಕುಮಾರ್ ಮಾತನಾಡಿ, ಕಳೆದ ಬಾರಿಗಿಂತ ಈ ಬಾರಿ ಶಿವರಾತ್ರಿ ಮಹೋತ್ಸವ ಚನ್ನಾಗಿ ಮೂಡಿಬರಬೇಕಿದೆ. ಕಳೆದ ಬಾರಿ ಅಧ್ಯಕ್ಷರಾಗಿ ಸೇವೆಯನ್ನು ಮಾಡಲು ಅವಕಾಶವನ್ನು ಕಲ್ಪಿಸಲಾಯಿತು. ಇದರಿಂದ ನಾನು ಪೂರ್ಣ ಪ್ರಮಾಣದಲ್ಲಿ ಭಾಗಿಯಾಗಲು ಸಹಾಯವಾಯಿತೆಂದು ತಿಳಿಸಿದರು.

ಚಳ್ಳಕೆರೆ ನಗರಸಭೆಯ ಸದಸ್ಯರಾದ ಕೆ.ಸಿ.ನಾಗರಾಜ್ ಮಾತನಾಡಿ, ನಾನು ಪ್ರಥಮವಾಗಿ ಶ್ರೀಮಠಕ್ಕೆ ಆಗಮಿಸಿದ್ದೇನೆ ಶ್ರೀಗಳ ನನ್ನ ಸಂಬಂಧ 92ರಿಂದಲೂ ಇದೆ ಈ ಮಹೋತ್ಸವದಲ್ಲಿ ಶ್ರೀಗಳು ನೀಡಿದ ನಿರ್ದೇಶನದಂತೆ ಕೆಲಸವನ್ನು ಮಾಡಲಾಗುವುದೆಂದು ತಿಳಿಸಿದರು.

ಶ್ರೀ ಗುರು ಕಭೀರಾನಂದಾಶ್ರಮದ ಕಾರ್ಯದರ್ಶಿಗಳಾದ ವಿ.ಎಲ್.ಪ್ರಶಾಂತ್ ಮಾತನಾಡಿ, ಕಳೆದ 93ನೇ ಶಿವರಾತ್ರಿ ಮಹೋತ್ಸವದಲ್ಲಿ 22 ಲಕ್ಷ ರೂ.ಗಳನ್ನು ವೆಚ್ಚ ಮಾಡುವುದರ ಮೂಲಕ ನಡೆಸಲಾಯಿತು, ಈ ಬಾರಿ 94ನೇ ಶಿವರಾತ್ರಿ ಮಹೋತ್ಸವದ ವೆಚ್ಚವನ್ನು 25 ಲಕ್ಷ ರೂಗಳಿಗೆ ನಿಗಧಿ ಮಾಡಲಾಗಿದೆ. ಇದಕ್ಕೆ ಎಲ್ಲರ ಸಹಾಯ ಮತ್ತು ಸಹಕಾರ ಅಗತ್ಯವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಇತ್ತೀಚೆಗೆ ನಿಧನರಾದ ಇತಿಹಾಸ ಸಂಶೋಧಕರಾದ ಪ್ರೊ.ಶ್ರೀಶೈಲಾರಾಧ್ಯರವರ ನಿಧನಕ್ಕೆ ಒಂದು ನಿಮಿಷ ಮೌನವನ್ನು ಆಚರಿಸಲಾಯಿತು.

ಈ ಪೂರ್ವಬಾವಿ ಸಭೆಯಲ್ಲಿ ಹಿರಿಯ ಪತ್ರಕರ್ತರಾದ ಉಜ್ಜನಪ್ಪ, ಇತಿಹಾಸ ಸಂಶೋಧಕರಾದ ಬಿ.ರಾಜಶೇಖರಪ್ಪ, ನಗರಾಭೀವೃದ್ದಿ ಪ್ರಾಧಿಕಾರದ ಮಾಜಿ ಸದಸ್ಯರಾದ ಓಂಕಾರ್, ಶ್ರೀಮತಿರೇಖಾ, ಜೆಡಿಎಸ್‌ನ ಗೋಪಾಲಸ್ವಾಮಿ ನಾಯಕ್, ಬಿಜೆಪಿಯ ನಂದಿ ನಾಗರಾಜ್, ಮಂಜುನಾಥ್ ಗುಪ್ತ, ನಗರಸಭಾ ಸದಸ್ಯರಾದ ವೆಂಕಟೇಶ್, ವರ್ತಕರಾದ ವೆಂಕಟೇಶ್, ಭದ್ರಾವತಿಯ ಕಾರ್ಯದರ್ಶಿ ರಾಮಮೂರ್ತಿ ಭಾಗವಹಿಸಿ ತಮ್ಮ ಸಲಹೆ ಮತ್ತು ಸಹಕಾರವನ್ನು ನೀಡಿದರು.



**ಚಿತ್ರದುರ್ಗ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಅವರು ಭಾನುವಾರ ಹುಬ್ಬಳ್ಳಿ ಹೋಗುವ ಮಾರ್ಗ ಮಧ್ಯೆಯಲ್ಲಿ ಬಿಜೆಪಿ ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮತ್ತು ಜಿಲ್ಲಾಧ್ಯಕ್ಷ ಮುರುಳಿ ಸೇರಿ ಅನೇ ಕಾರ್ಯಕರ್ತರು ಚಿತ್ರದುರ್ಗದ ರಾಷ್ಟ್ರೀಯ ಹೆದ್ದಾರಿ ಕ್ಯಾದಿಗೆರೆ ಬಳಿ ಸ್ವಾಗತ ಕೋರಿದರು. ಈ ಸಂದರ್ಭದಲ್ಲಿ ನಗರ ಅಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ, ಯುವ ಮುಖಂಡ ಡಾ. ಸಿದ್ದಾರ್ಥ್, ಸಂಪತ್ ಕುಮಾರ್, ನಾಗರಾಜ್ ಬೇಂದ್ರೆ, ಶಿವಣ್ಣ ಚಾರ್, ಶಂಭು ಜೆ ಎಸ್, ಚಂದ್ರಿಕಾ ಲೋಕನಾಥ್, ಶಾಮಲಾ ಶಿವಪ್ರಕಾಶ್, ಶೈಲಜಾ ರೆಡ್ಡಿ, ಶಾಂತಮ್ಮ, ಶಿವಪ್ರಕಾಶ್ ದಗ್ಗೆ, ಕೃಷ್ಣ, ಅರುಣ, ಕವನ, ಲೀಲಾ, ಕಿರಣ್, ಯಶವಂತ್, ತಿಪ್ಪೇಸ್ವಾಮಿ ಮುಂತಾದ ಕಾರ್ಯಕರ್ತರು ಉಪಸ್ಥಿತರಿದ್ದರು**

## ಶೋಷಿತರ ಹಕ್ಕುಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಇದು: ಸಚಿವ

» ಚಿತ್ರದುರ್ಗ

ಶೋಷಿತರ ಹಕ್ಕುಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಇದು ಯಾವುದೇ ಸಮುದಾಯಗಳ ವಿರುದ್ಧ ಸಮಾವೇಶ ಅಲ್ಲ ಎಂದು ಸಚಿವ ಕೆ.ಎನ್ ರಾಜಣ್ಣ ಹೇಳಿದರು. ಚಿತ್ರದುರ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನಮ್ಮ ಸಮಾಜದಲ್ಲಿರುವ ಅಸಹಾಯಕ ಸಮಾಜಗಳಿಗೆ ಧ್ವನಿ ನೀಡುವಂತ ಸಮಾವೇಶ ಇದಾಗಿದೆ.ಕಾಂತರಾಜ್ ಆಯೋಗ ರಚನೆ ಆಗಿದೆ. ಈಗಾಗಲೇ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ವರದಿ ನೀಡಿದ್ದಾರೆ. ಆ ವರದಿ ಅಂಶಗಳು ಏನಿದೆ ಎಂದು ಯಾರಿಗೂ ಗೊತ್ತಿಲ್ಲ. ಊಹೆ ಆಧಾರದ ಮೇಲೆ ಮಾತನಾಡುವುದು ಶೋಭೆತರಲ್ಲ. ವರದಿ ಸಲ್ಲಿಕೆ ಬಳಿಕ ಪರಾಮರ್ಶೆ ಮಾಡಲಿ ಎಂದರು. ವರದಿಯ ಸಾಧಕಬಾಧಕಗಳ ಬಗ್ಗೆ ಚರ್ಚೆ ಮಾಡಬೇಕಿದೆ ಎಂದರು.

ಫಾಸ್ಟ್ ನ್ಯೂಸ್

### ನಿತೀಶ್ ಕುಮಾರ್ ನಡೆ ಮುಂಚೆಯೇ ತಿಳಿದಿತ್ತು; ಖರ್ಗೆ

» ಕಲಬುರಗಿ

ನಿತೀಶ್ ಕುಮಾರ್ ಮಹಾಘಟಬಂಧನ್ ತೊರೆಯುವ ಬಗ್ಗೆ ಮುಂಚೆಯೇ ಗೊತ್ತಿತ್ತು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭಾನುವಾರ ಹೇಳಿದ್ದಾರೆ. ಬಿಹಾರ ಮುಖ್ಯಮಂತ್ರಿ ಸ್ಥಾನಕ್ಕೆ ನಿತೀಶ್ ಕುಮಾರ್ ರಾಜೀನಾಮೆ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, ಆರ್ ಜೆಡಿ ಮುಖ್ಯಸ್ಥ ಲಾಲೂ ಪ್ರಸಾದ್ ಯಾದವ್ ಹಾಗೂ ಅವರ ಮಗ ತೇಜಸ್ವಿ ಯಾದವ್ ಅವರೊಂದಿಗೆ ಮಾತನಾಡುವಾಗ ನಿತೀಶ್ ಮಹಾಘಟಬಂಧನ್ ತೊರೆಯುವ ಬಗ್ಗೆ ಮಾಹಿತಿ ನೀಡಿದ್ದರು. ಅದು ಇಂದು ನಿಜವಾಗಿದೆ. ಆಯಾರಾಮ್ ಗಯಾರಾಮ್ ಸಂಸ್ಕೃತಿವುಳ್ಳ ಅನೇಕ ರಾಜಕಾರಣಿಗಳು ದೇಶದಲ್ಲಿದ್ದಾರೆ ಎಂದರು. ನಿತೀಶ್ ಕುಮಾರ್ ಇಂಡಿಯಾ ಮೈತ್ರಿಕೂಟ ತೊರೆಯುತ್ತಿರುವ ಬಗ್ಗೆ ಮುಂಚೆಯೇ ಗೊತ್ತಿದ್ದರಿಂದ ಅವರೊಂದಿಗೆ ಮಾತುಕತೆಗೆ ಯತ್ನಿಸಿದ್ದೇವು. ಅಂತಿಮವಾಗಿ ಅವರು ಮೈತ್ರಿಕೂಟ ಬಿಡುವುದು ನಿಜವಾಗಿದೆ. ಅವರು ಇರಲು ಬಯಸಿದ್ದರೆ ಇರುತ್ತಿದ್ದರು. ಆದರೆ, ಅವರ ಹೊರ ಹೋಗಲು ಬಯಸಿದ್ದರಿಂದ ಮೈತ್ರಿ ತೊರೆದಿದ್ದಾರೆ. ಆದರೆ ನಮ್ಮ ಹೋರಾಟ ಮುಂದುವರೆಯಲಿದೆ ಎಂದು ತಿಳಿಸಿದರು. ಮುಂಬರುವ ಲೋಕಸಭಾ ಚುನಾವಣೆ ಸೀಟು ಹಂಚಿಕೆ ಕುರಿತು ಇಂಡಿಯಾ ಮೈತ್ರಿಕೂಟದ ಇತರ ಪಕ್ಷಗಳೊಂದಿಗೆ ಚರ್ಚಿಸಲು ಆರು ಜನರ ಸಮಿತಿ ರಚಿಸಲಾಗಿದೆ. ವಿವಿಧ ಪಕ್ಷಗಳೊಂದಿಗೆ ಸೀಟು ಹಂಚಿಕೆ ಕುರಿತು ಚರ್ಚೆ ನಡೆದಿದೆ. ಕೆಲವು ಕಡೆ ಒಮ್ಮತಕ್ಕೆ ಬರಲಾಗಿದೆ. ಇನ್ನೂ ಕೆಲವೆಡೆ ಬಂದಿಲ್ಲ ಎಂದು ಅವರು ಹೇಳಿದರು.

### ಕನ್ನಡದ ಬಿಗ್ ಬಾಸ್ ಸೀಸನ್ 10ರ ವಿನ್ನರ್ ಕಾರ್ತಿಕ್ ಮಹೇಶ್



ಬಿಗ್ ಬಾಸ್ ಸೀಸನ್ 10ರ ವಿನ್ನರ್ ಆಗಿ ಕಾರ್ತಿಕ್ ಮಹೇಶ್ (ಕಾರ್ತಿಕ್ ಮಹೇಶ್) ಅವರು ಇದ್ದಾರೆ. ಪ್ರತಾಪ್, ಸಂಗೀತಾ ಶೃಂಗೇರಿ ಠಕ್ಕರ್ ಕೊಟ್ಟು ಕಾರ್ತಿಕ್ ಮಹೇಶ್ ಈ ಸೀಸನ್ ವಿನ್ನರ್ ಆಗಿದ್ದಾರೆಅಸಮರ್ಥರಾಗಿ ಬಿ ಬಾಸ್ ಮನೆಗೆ ಕಾಲಿಟ್ಟ ಕಾರ್ತಿಕ್ ಮಹೇಶ್ ಅವರು ಮೊದಲ ದಿನದಿಂದಲೂ ತಮ್ಮ ಆಟವಾಡುತ್ತಾ ಅಭಿಮಾನಿಗಳ ಮನಗೆದ್ದಿದ್ದರು. ಸಂಗೀತಾ (ಸಂಗೀತಾ) ಮತ್ತು ನಮ್ರತಾ (ನಮ್ರತಾ) ಗೌಡ ಜೊತೆಗಿನ ಸ್ನೇಹ ವಿಚಾರವಾಗಿ ಕಾರ್ತಿಕ್ ಸಖತ್ ಹೈಲೆಟ್ ಆಗಿದ್ದರು.ವಿನಯ್‌ಗೆ ಎದುರಾಗಿ ನಿಂತು ಸಾಕಷ್ಟು ಟಾಸ್ಕ್‌ಗಳಲ್ಲಿ ಕಾರ್ತಿಕ್ ಠಕ್ಕರ್ ಕೊಟ್ಟಿದ್ದರು. ನೃತ್ಯ, ಮನರಂಜನೆ ಎಲ್ಲದರಲ್ಲೂ ಕಾರ್ತಿಕ್ ಮಹೇಶ್ ಹೈಲೆಟ್ ಆಗಿದ್ದಾರೆ. ಬಿಗ್ ಬಾಸ್ ಕನ್ನಡ 10ರಲ್ಲಿ ಅಭಿಮಾನಿಗಳ ಹೃದಯ ಗೆದ್ದು ವಿನ್ನರ್ ಆಗಿ ಗೆದ್ದು ಬೀಗಿದ್ದಾರೆ. ಕಡೆಯದಾಗಿ ಸಂಗೀತಾ, ಪ್ರತಾಪ್ (ಡ್ರೋನ್ ಪ್ರತಾಪ್) ಜೊತೆ ಕಾರ್ತಿಕ್‌ಗೆ ಪೈಪೋಟಿ ಇತ್ತು. ಈಗ ಕಾರ್ತಿಕ್ ಬಿಗ್ ಬಾಸ್ ವಿನ್ನರ್ ಆಗಿ ಸಂಭ್ರಮಿಸಿದ್ದಾರೆ

### ಪ್ರಿಯಾಂಕಾ ಗಾಂಧಿ ಕರ್ನಾಟಕದಿಂದ ಸ್ಪರ್ಧೆ ಸಾಧ್ಯತೆ

» ಕೊಪ್ಪಳ

2024ರ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ಕರ್ನಾಟಕದಿಂದ ಸ್ಪರ್ಧೆ ಮಾಡಲಿದ್ದಾರೆಯೇ ? ಇಂತಹದೊಂದು ಸುದ್ದಿ ದೆಹಲಿಯಿಂದ ಬೆಂಗಳೂರಿನವರೆಗೆ ಹರಿದಾಡುತ್ತಿದೆ. ಇವರು ಕಣಕ್ಕಿಳಿಯಲಿದ್ದಾರೆ ಎಂದು ಹೇಳಲಾದ ಈ ಕ್ಷೇತ್ರ ಸುರಕ್ಷಿತ ಮತ್ತು ಕರ್ನಾಟಕದಲ್ಲಿ ಹೆಚ್ಚಿನ ಸ್ಥಾನಗಳನ್ನು ಗೆಲ್ಲಲು ಸಹಕಾರಿಯಾಗುತ್ತದೆ ಎನ್ನುವುದು ವರಿಷ್ಠರ ಅಭಿಲಾಷೆ ಎಂದು ಹೇಳಲಾಗುತ್ತಿದೆ..

ಸ್ಥಳೀಯ ಕಾಂಗ್ರೆಸ್ ನಾಯಕರ ಗಮನಕ್ಕೆ ತಾರದೆ ಹೈಕಮಾಂಡ್ ರಹಸ್ಯ ಸಮೀಕ್ಷೆ ನಡೆಸಿದ್ದು, ಪೂರಕ ವಾತಾವರಣ ಇದೆ ಎಂದು ವ್ಯಕ್ತವಾಗಿದ್ದು, ಈ ಸುದ್ದಿಗೆ ಮತ್ತಷ್ಟು ಪುಷ್ಠಿ ಬಂದಿದೆ. ನೆರೆಯ ತೆಲಂಗಾಣದಿಂದ ಸ್ಪರ್ಧಿಸುವ ಬಗ್ಗೆಯೂ ಗಾಂಧಿ ಕುಟುಂಬ ಚಿಂತನೆ ನಡೆಸಿದೆ ಎಂದು ಪಕ್ಷದ ಮೂಲಗಳು ಖಚಿತಪಡಿಸಿವೆ. ಅಲ್ಲಿಯೂ ಸಮೀಕ್ಷೆ ನಡೆಸಿದ್ದು ಗೆಲುವು ಖಚಿತ ಎಂದು ವರದಿ ಹೇಳಿದೆ.

ಪ್ರಿಯಾಂಕಾ ಗಾಂಧಿ ಕೊಪ್ಪಳದಿಂದ ಕಣಕ್ಕಿಳಿಯುವ ಸಾಧ್ಯತೆಯಿದೆ. ಸಾಮಾಜಿಕ ಜಾಲತಾಣಗಳಲ್ಲಿಯೂ ಈ ಸುದ್ದಿ ಕುರಿತು ಚರ್ಚೆ ನಡೆಯುತ್ತಿದೆ. ಅನೇಕ ಕಾಂಗ್ರೆಸ್ ನಾಯಕರು ಫೇಸ್‌ಬುಕ್, ಎಕ್ಸ್ (ಟ್ವಿಟರ್) ಮತ್ತು ಯೂಟ್ಯೂಬ್‌ಗಳಲ್ಲಿ ಪ್ರಿಯಾಂಕಾ ಅವರಿಗೆ ಅಹ್ವಾನ ಮತ್ತು ಸ್ವಾಗತ ಕೋರುತ್ತಿದ್ದಾರೆ. ದಯಮಾಡಿ ಕೊಪ್ಪಳಕ್ಕೆ ಬನ್ನಿ ಎಂಬ ಹ್ಯಾಷ್‌ಟ್ಯಾಗ್ ನೊಂದಿಗೆ ಹಿರಿಯ ನಾಯಕರು ಆಹ್ವಾನ ನೀಡುತ್ತಿದ್ದಾರೆ.

ಪ್ರಮುಖ ಸುದ್ದಿ

# ಪ್ರತಿಯೊಬ್ಬರ ಮಾತಿನಲ್ಲೂ ಹೃದಯದಲ್ಲೂ ರಾಮ ಇದ್ದಾನೆ

» ನವದೆಹಲಿ

ಪ್ರತಿಯೊಬ್ಬರ ಮಾತಿನಲ್ಲೂ ರಾಮ, ಎಲ್ಲರ ಹೃದಯದಲ್ಲಿ ರಾಮ ಇದ್ದಾನೆ. “ಅಯೋಧ್ಯೆಯಲ್ಲಿ ಪ್ರಾಣ ಪ್ರತಿಷ್ಠಾಪನಾ ಸಂದರ್ಭ ದೇಶದ ಕೋಟ್ಯಂತರ ಜನರನ್ನು ಒಟ್ಟುಗೂಡಿಸಿದೆ ಎಂದು ಹೇಳಿರುವ ಪ್ರಧಾನಿ ನರೇಂದ್ರ ಮೋದಿ ಅವರು ಭಗವಾನ್ ರಾಮನ ಆಡಳಿತ ನಮ್ಮ ಸಂವಿಧಾನ ರಚನೆಕಾರರಿಗೆ ಸ್ಫೂರ್ತಿಯ ಮೂಲವಾಗಿದೆ ಎಂದು ಹೇಳಿದ್ದಾರೆ.

ಪ್ರತಿಯೊಬ್ಬರ ಭಾವನೆಗಳು ಸರ್ವಸಮ್ಮತವಾಗಿದೆ ಮತ್ತು ಪ್ರತಿಯೊಬ್ಬರ ಭಕ್ತಿ ಏಕರೂಪವಾಗಿದೆ. ಪ್ರತಿಯೊಬ್ಬರ ಮಾತಿನಲ್ಲೂ ರಾಮನು, ಪ್ರತಿಯೊಬ್ಬರ ಹೃದಯದಲ್ಲಿ ರಾಮ” ಇದ್ದಾನೆ. ಜನವರಿ 22 ರ ಸಂಜೆ ಇಡೀ ದೇಶ ‘ರಾಮ ಜ್ಯೋತಿ’ಯನ್ನು ಬೆಳಗಿಸಿ ದೀಪಾವಳಿ ಆಚರಿಸಿತು. ಇದು ದೇಶದ ಸಾಮೂಹಿಕ ಶಕ್ತಿ ಪ್ರತೀಕ ಎಂದಿದ್ದಾರೆ.

ಅಕಾಶವಾಣಿಯ ಮನ್ ಕಿ ಬಾತ್‌ನ 109ನೇ ಸಂಚಿಕೆಯಲ್ಲಿ ದೇಶವಾಸಿಗಳನ್ನುದ್ದೇಶಿಸಿ ಮಾತನಾಡಿದ ಅವರು ಭಾರತದ ಸಂವಿಧಾನ ಜೀವಂತ ದಾಖಲೆ ಎಂದು ಕರೆಯುವಷ್ಟು ತೀವ್ರವಾದ ಬುದ್ಧಿಮತ್ತೆಯಿಂದ ಸಂವಿಧಾನವನ್ನು ರಚಿಸಲಾಗಿದೆ ಎಂದು ತಿಳಿಸಿದ್ದಾರೆ.

ಹೀಗಾಗಿಯೇ “ಭಗವಾನ್ ರಾಮನ ಆಡಳಿತ ಸಂವಿಧಾನ ರಚನೆಕಾರರಿಗೆ ಸ್ಫೂರ್ತಿಯ ಸೆಲೆಯಾಗಿದೆ. “ಮಕರ ಸಂಕ್ರಾಂತಿಯಿಂದ ಜನವರಿ 22 ರವರೆಗೆ ಸ್ವಚ್ಛತಾ ಅಭಿಯಾನ ನಡೆಸುವಂತೆ ದೇಶದ ಜನರಿಗೆ ಮನವಿ ಮಾಡಲಾಗಿತ್ತು. ಲಕ್ಷಾಂತರ ಜನರು ಭಕ್ತಿಯಿಂದ ಸೇರಿಕೊಂಡು ತಮ್ಮ ಪ್ರದೇಶದ ಧಾರ್ಮಿಕ ಸ್ಥಳ ಸ್ವಚ್ಛಗೊಳಿಸಿದ್ದು ಅತೀವ ಸಂತಸವಾಗಿದೆ ಎಂದಿದ್ದಾರೆ.

ಎರಡು ದಿನಗಳ ಹಿಂದೆ ದೇಶವಾಸಿಗಳು 75 ನೇ ಗಣರಾಜ್ಯೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಿದ್ದೇವೆ ಮತ್ತು ಈ ವರ್ಷ ನಮ್ಮ ಸಂವಿಧಾನಕ್ಕೆ 75 ವರ್ಷ ಪೂರೈಸುತ್ತಿದೆ. ಜೊತೆಗೆ ಸುಪ್ರೀಂ ಕೋರ್ಟ್



ಕೂಡ 75 ವರ್ಷಗಳನ್ನು ಪೂರೈಸುತ್ತಿದೆ ಇದು ಖುಷಿಯ ವಿಚಾರ ಎಂದರು.

ಸಂವಿಧಾನದ ಮೂಲ ಪ್ರತಿಯ ಮೂರನೇ ಭಾಗದಲ್ಲಿ, ಭಾರತದ ನಾಗರಿಕರ ಮೂಲಭೂತ ಹಕ್ಕುಗಳನ್ನು ವಿವರಿಸಲಾಗಿದೆ ಮತ್ತು ಇದು ಗಮನಾರ್ಹವಾಗಿದೆ. ಮೂರನೇ ಭಾಗದ ಆರಂಭದಲ್ಲಿ, ಸಂವಿಧಾನದ ನಿರ್ಮಾತೃಗಳು ಭಗವಾನ್ ರಾಮ್, ಮಾತಾ ಸೀತಾ ಮತ್ತು ಲಕ್ಷ್ಮಣ ಅವರ ಚಿತ್ರಗಳಿಗೆ ಸರಿಯಾದ ಸ್ಥಳ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

ಕ್ರೀಡೆ, ರಕ್ಷಣಾ ಪಡೆಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಮಹಿಳಾ ಶಕ್ತಿಯನ್ನು ಶ್ಲಾಘಿಸಿದ ಪ್ರಧಾನಿ ನರೇಂದ್ರ ಮೋದಿ, ಕೃಷಿ ಕ್ಷೇತ್ರದಲ್ಲೂ ಮಹಿಳೆಯರು ಉತ್ತಮ ಕೆಲಸ ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಕೇಂದ್ರ ಭದ್ರತಾ ಪಡೆಗಳು ಮತ್ತು ದೆಹಲಿ ಪೊಲೀಸರ ಮಹಿಳಾ ತುಕಡಿಗಳು ಕರ್ತವ್ಯ ಪಥದಲ್ಲಿ ಸಾಗಲು ಪ್ರಾರಂಭಿಸಿದಾಗ, ಪ್ರತಿಯೊಬ್ಬರೂ ಹೆಮ್ಮೆಯ ಭಾವ ಅನುಭವಿಸಿದರು. ಈ ಬಾರಿ ಪರೇಡ್‌ನಲ್ಲಿ 20 ಕವಾಯತು ತಂಡಗಳಲ್ಲಿ 11 ಮಹಿಳಾ ತುಕಡಿಗಳು, ಟ್ಯಾಬ್ಲಾಕ್ಸ್‌ನಲ್ಲಿ ಎಲ್ಲಾ ಕಲಾವಿದರು ಮಹಿಳೆಯರು, 1500 ಹೆಣ್ಣುಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದರು, ಅನೇಕ ಮಹಿಳಾ ಕಲಾವಿದರು ಶಂಖ ಚಿಪ್ಪುಗಳು, ನಾದಸ್ವರಂ ಮುಂತಾದ ಭಾರತೀಯ ಸಂಗೀತ ವಾದ್ಯಗಳನ್ನು ನುಡಿಸಿದರು ಮತ್ತು ಡಿಆರ್‌ಡಿಒದ ಟ್ಯಾಬ್ಲೋ ಎಲ್ಲರ ಗಮನ ಸೆಳೆಯಿತು. ಇದು ಜಲ, ಭೂಮಿ, ಗಾಳಿ, ಸೈಬರ್ ಅಥವಾ ಬಾಹ್ಯಾಕಾಶ ಹೀಗೆ ಪ್ರತಿಯೊಂದು ಕ್ಷೇತ್ರದಲ್ಲೂ ಮಹಿಳಾ ಶಕ್ತಿಯು ದೇಶವನ್ನು ಹೇಗೆ ರಕ್ಷಿಸುತ್ತಿದೆ ಎಂಬುದನ್ನು ತೋರಿಸಿದೆ,” ಎಂದು ಹೇಳಿದ್ದಾರೆ.

**ಅದ್ಭುತ ಸಾಧನೆ:** “ಬದಲಾಗುತ್ತಿರುವ ಭಾರತದಲ್ಲಿ, ನಮ್ಮ ಹೆಣ್ಣುಮಕ್ಕಳು ಮತ್ತು ದೇಶದ ಮಹಿಳೆಯರು ಪ್ರತಿಯೊಂದು ಕ್ಷೇತ್ರದಲ್ಲೂ ಅದ್ಭುತಗಳನ್ನು ಮಾಡುತ್ತಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.

ಮಹಿಳೆಯರು ತಮ್ಮದೇ ಆದ ಛಾಪು ಮೂಡಿಸಿರುವ ಮತ್ತೊಂದು ಕ್ಷೇತ್ರವಿದೆ, ಅದು ಸ್ವ-ಸಹಾಯ ಗುಂಪುಗಳು. ಇಂದು, ಮಹಿಳಾ ಸ್ವಸಹಾಯ ಗುಂಪುಗಳ ಸಂಖ್ಯೆ ದೇಶವೂ ಹೆಚ್ಚಿದೆ ಮತ್ತು ಅವರ ಕೆಲಸದ ವ್ಯಾಪ್ತಿಯೂ ಸಾಕಷ್ಟು ವಿಸ್ತರಿಸಿದೆ, ”ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T